# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 136 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 11–12–2023 ಸೋಮವಾರ | ಪುಟ: 4 | ಬೆಲೆ : ರೂ.2–00

Volume - 01 Issue - 136 | Title- Code: KARKAN 28269 | Chitradurga | Date: 11-12-2023 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಶಿಕ್ಷಣದ ಜತೆ ಮಕ್ಕಳಿಗೆ ಸಂಸ್ಕಾರ ಕಲಿಸಿ; ರಾಮಲಿಂಗಶೆಟ್ಟಿ 2

ಸೋನಿಯಾ ಗಾಂಧಿ ಆದರ್ಶವನ್ನು ಎಲ್ಲರೂ ಮೈಗೂಡಿಸಿಕೊಳ್ಳಬೇಕು: ಶಿವಮ್ಮ ರಾಜಣ್ಣ 3

ಇಂಜಿನಿಯರಿಂಗ್, ಮೆಡಿಕಲ್ ಕಾಲೇಜು ಸ್ಥಾಪನೆಗೆ ಚಿಂತನೆ ಯೋಜನೆ ಫಲಿಸಲಿ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಜನವರಿ 5ರಂದು 90ನೇ ಸರ್ವ ಸದಸ್ಯರ ಸಭೆ

» ದಾವಣಗೆರೆ

ಕರ್ನಾಟಕ ಕಾರ್ಯನಿರತ ಪತ್ರಕರ್ತರ ರಾಜ್ಯ ಸಂಘದ 2022 –23ನೇ ಸಾಲಿನ 90ನೇ ಸರ್ವ ಸದಸ್ಯರ ಮಹಾಸಭೆಯನ್ನು 2024ರ ಜನವರಿ 5ರಂದು ಬೆಳಿಗ್ಗೆ 11 ಗಂಟೆಗೆ ಮಂಗಳೂರಿನ ಅಡ್ಯಾರ ಸಹ್ಯಾದ್ರಿ ಇಂಜಿನಿಯರಿಂಗ್ ಕಾಲೇಜಿನ ಸಭಾಂಗಣದಲ್ಲಿ ರಾಜ್ಯಾಧ್ಯಕ್ಷ ಶಿವಾನಂದ್ ತಗಡೂರು ಇವರ ಅಧ್ಯಕ್ಷತೆಯಲ್ಲಿ ರಾಜ್ಯ ಪ್ರಧಾನಕಾರ್ಯದರ್ಶಿ ಜಿ ಸಿ ಲೋಕೇಶ್ ರವರ ಉಪಸ್ಥಿತಿಯಲ್ಲಿ ಏರ್ಪಡಿಸಲಾಗಿದೆ ಎಂದು ಜಿಲ್ಲಾಧ್ಯಕ್ಷ ಇ. ಎಂ. ಮಂಜುನಾಥ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸರ್ವ ಸದಸ್ಯರ ಸಭೆಯಲ್ಲಿ ಸಭೆಯ ತಿಳುವಳಿಕೆ ಪತ್ರವನ್ನು ಓದಿ ದಾಖಲು ಮಾಡುವುದು, 2022 –23ನೇ ಸಾಲಿನ ವಾರ್ಷಿಕ ವರದಿ ಮಂಡನೆ ಹಾಗೂ ಅನುಮೋದನೆ ಮತ್ತು 2022– 23ನೇ ಸಾಲಿನ ವಾರ್ಷಿಕ ಲೆಕ್ಕ ಪರಿಶೋಧನಾ ವರದಿ ಮಂಡನೆ ಹಾಗೂ ಅನುಮೋದನೆ ಪಡೆಯಲಾಗುವುದು ಹಾಗೂ ಕರ್ನಾಟಕ ಯೂನಿಯನ್ ಆಫ್ ವರ್ಕಿಂಗ್ ಜರ್ನಲಿಸ್ಟ್ ಎಂಬ ಹೆಸರನ್ನು ಆಡಳಿತ ಭಾಷೆಯಾದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ( ರಿ .)ಎಂದು ಬೈಲಾದ ಶಿರೋನಾಮೆ ಯಲ್ಲಿ ತಿದ್ದುಪಡಿ ಬಗ್ಗೆ, ದಾವಣಗೆರೆಯಲ್ಲಿ ನಡೆಯುವ 38ನೇ ಪತ್ರಕರ್ತರ ರಾಜ್ಯ ಸಮ್ಮೇಳನದ ಸಿದ್ಧತಾ ವಿಚಾರ ಸೇರಿದಂತೆ ಇನ್ನಿತರೆ ವಿಷಯಗಳನ್ನು ಅಧ್ಯಕ್ಷರ ಅಪ್ಪಣೆ ಮೇರೆಗೆ ಚರ್ಚಿಸಲಾಗುತ್ತದೆ ಸಭೆಯಲ್ಲಿ ಸರ್ವ ಸದಸ್ಯರು ಭಾಗವಹಿಸಬಹುದು ಇದಲ್ಲದೆ ಸಭೆಯಲ್ಲಿ ವಿಷಯ ಪ್ರಸ್ತಾಪಿಸಲು ಬಯಸುವವರು ವಿಷಯಸೂಚಿಯನ್ನು ಲಿಖಿತವಾಗಿ ಡಿಸೆಂಬರ್ 26ರ ಒಳಗೆ ರಾಜ್ಯ ಘಟಕಕ್ಕೆ ಕಳುಹಿಸಿಕೊಡಬೇಕು.

# 2 ಕೋಟಿ ರೂ.ವೆಚ್ಚ ನೂತನ ಶಾಲಾ ಕೊಠಡಿಗಳ ಕಟ್ಟಡ ಕಾಮಗಾರಿಗೆ ಶಾಸಕ ಚಂದ್ರಪ್ಪ ಶಂಕುಸ್ಥಾಪನೆ

» ಹೊಳಲ್ಕೆರೆ

ಯಾವುದೇ ಒಂದು ದೇಶ ಮುಂದುವರೆಯಬೇಕಾದರೆ ಶಿಕ್ಷಣ ಮುಖ್ಯ. ಮಕ್ಕಳೆ ದೇಶದ ಸಂಪತ್ತು. ಸರ್ಕಾರಗಳು ಹೆಚ್ಚಿನ ಕಾಳಜಿ ವಹಿಸುತ್ತಿವೆ ಎಂದು ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.

ತಾಲ್ಲೂಕಿನ ಚಿತ್ರಹಳ್ಳಿಯಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಎಸ್.ಎಸ್.ಡಿ.ಪಿ. ಯೋಜನೆಯಡಿ ಎರಡು ಕೋಟಿ ರೂ.ವೆಚ್ಚದಲ್ಲಿ ನೂತನ ಕೊಠಡಿಗಳ ಕಟ್ಟಡ ಕಾಮಗಾರಿಗೆ ಶನಿವಾರ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು.

ಏಪ್ರಿಲ್ 30 ರೊಳಗೆ ಶಾಲಾ ಕಟ್ಟಡ ಪೂರ್ಣಗೊಳಿಸಬೇಕೆಂದು ಸಂಬಂಧಪಟ್ಟವರಿಗೆ ಸೂಚಿಸಿದ ಶಾಸಕರು ಬಿಬಿಎಂ. ಬಿಸಿಎ. ಕೋರ್ಸ್ ತೆರೆದರೆ ಮಕ್ಕಳ ಸಂಖ್ಯೆ ಜಾಸ್ತಿಯಾಗಬಹುದು. ಮುಂದಿನ



ದಿನಗಳಲ್ಲಿ ಪಿ.ಜಿ.ಕೂಡ ಆರಂಭಿಸೋಣ. ಬಿ.ಸಿ.ಎಂ.ಹಾಸ್ಟೆಲ್ ತೆರೆಯೋಣ. ಇಡಿ ರಾಜ್ಯದಲ್ಲಿ ಯಾವ ಶಾಸಕರು ಸರ್ಕಾರಿ ಶಾಲೆ ಮಕ್ಕಳಿಗೆ ಉಚಿತ ಬಸ್‌ಗಳನ್ನು ನೀಡಿಲ್ಲ. ನನ್ನ ಕ್ಷೇತ್ರದಲ್ಲಿ ಹಳ್ಳಿಗಾಡಿನಿಂದ ಸರ್ಕಾರಿ ಶಾಲೆಗೆ ಬರುವ ಮಕ್ಕಳ ಶಿಕ್ಷಣಕ್ಕೆ ಅನುಕೂಲವಾಗಲಿ ಎಂದು ಐದು ಬಸ್‌ಗಳ ಸಂಚಾರ ಸ್ವಂತ ಖರ್ಚಿನಿಂದ ಆರಂಭಿಸಿದ್ದೇನೆ. ಏಪ್ರಿಲ್ ಒಳಗೆ ಮತ್ತೆ ಐದು ಬಸ್‌ಗಳನ್ನು ನೀಡುತ್ತೇನೆಂದು ಭರವಸೆ ಕೊಟ್ಟರು. ಇಸ್ರೇಲ್–ಹಮಾಸ್ ಯುದ್ಧ ನಡೆಯುತ್ತಿದೆ. ಕೇವಲ 90 ಲಕ್ಷ ಜನಸಂಖ್ಯೆಯಿರುವ ಇಸ್ರೇಲ್ ಪ್ರಪಂಚವನ್ನೆ ಗೆಲ್ಲುವಭರವಸೆಯಿಟ್ಟುಕೊಂಡಿದೆ.ಏಕೆಂದರೆ ಅವರಲ್ಲಿ ಅಂತಹ ದೇಶಾಭಿಮಾನವಿದೆ. ಅಲ್ಲಿ ಹುಟ್ಟಿದ ಹೆಣ್ಣಾಗಲಿ ಗಂಡಾಗಲಿ ಶಿಕ್ಷಣದ ನಂತರ ಐದು ವರ್ಷಗಳ ಕಾಲ ಸೇನೆಯಲ್ಲಿ ಸೇವೆ ಸಲ್ಲಿಸುವುದು ಕಡ್ಡಾಯ. ದೇಶ ಸುರಕ್ಷಿತವಾಗಿದ್ದರೆ ಪ್ರತಿ ಪ್ರಜೆಯೂ ಕ್ಷೇಮವಾಗಿರಬಹುದು. ನಮ್ಮ ದೇಶದ ಪ್ರಧಾನಿ ನರೇಂದ್ರಮೋದಿ ಅಷ್ಟೊಂದು ಶಕ್ತಿಶಾಲಿಯಾಗಿದ್ದಾರೆ. ಹಿಂದೆ ನಮ್ಮ ದೇಶದ ಮೇಲೆ ಯಾರಾದರೂ ಯುದ್ದಕ್ಕೆ ಬಂದರೆ ಬೇರೆ ರಾಷ್ಟ್ರಗಳ ನೆರವು ಕೇಳುವ ಪರಿಸ್ಥಿತಿಯಿತ್ತು. ಈಗ ನಮ್ಮ ದೇಶದ ಸೈನಿಕರು ಬಲಿಷ್ಟವಾಗಿದ್ದಾರೆ. ಶಸ್ತ್ರಾಸ್ತ್ರಗಳು, ಯುದ್ಧ ವಿಮಾನಗಳು ಶಕ್ತಿಶಾಲಿಯಾಗಿವೆ. ಸರ್ವಶಿಕ್ಷ ಅಭಿಯಾನದಡಿ ಶಾಲೆಗಳನ್ನು ತೆರೆಯಲಾಗಿದೆ. ಮಧ್ಯಾಹ್ನದ ಬಿಸಿಯೂಟ ಸೇರಿದಂತೆ ಅನೇಕ ಸೌಲತ್ತುಗಳನ್ನು ಸರ್ಕಾರ ಮಕ್ಕಳ ಶಿಕ್ಷಣಕ್ಕಾಗಿ ನೀಡುತ್ತಿದೆ. ಎಲ್ಲವನ್ನು ಸದುಪಯೋಗಪಡಿಸಿಕೊಂಡು ಶಿಕ್ಷಣವಂತರಾಗುವಂತೆ ಮಕ್ಕಳಿಗೆ ಶಾಸಕ ಡಾ.ಎಂ.ಚಂದ್ರಪ್ಪ ಕರೆ ನೀಡಿದರು.

ಹೆಣ್ಣು ಮಕ್ಕಳು ಗಂಡು ಮಕ್ಕಳಿಗೆ ಪ್ರತ್ಯೇಕ ಹಾಸ್ಟೆಲ್ ವ್ಯವಸ್ಥೆ ಕಲ್ಪಿಸಲಾಗಿದೆ. ಇಲ್ಲಿ ಮಿನಿ ಸ್ಟೇಡಿಯಂ ಕಟ್ಟುವ ಚಿಂತನೆಯಿದೆ ಎಂದು ಹೇಳಿದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲರಾದ ಎಂ.ಶಿವಲಿಂಗಪ್ಪ, ಚಿತ್ರಹಳ್ಳಿ ದೇವರಾಜ್, ಕೆಂಚವೀರಪ್ಪ, ನಾಗರಾಜ್, ಮಲ್ಲೇಶಪ್ಪ, ಕಾಂತರಾಜ್, ನಂದಕುಮಾರ್, ಡಾ.ಎನ್.ರವಿ, ಅಂಕಳಪ್ಪ, ಪ್ರವೀಣ್, ಹರ್ಷ, ಕೆ.ಆರ್.ಐ.ಡಿ.ಎಲ್. ಸಹಾಯಕ ಕಾರ್ಯಪಾಲಕ ಅಭಿಯಂತರ ಸಚಿನ್‌ಕೀರ್ತಿ, ಕಾಲೇಜಿನ ಬೋಧಕ–ಬೋಧಕೇತರ ಸಿಬ್ಬಂದಿಗಳು ಸಮಾರಂಭದಲ್ಲಿ ಹಾಜರಿದ್ದರು.

## ದೇವರಮರಿಕುಂಟೆ ರಸ್ತೆಯಲ್ಲೇ ಜೂಜಾಟ: ಎಂಟು ಜನ ಹಾಗೂ 30 ಸಾವಿರ ಹಣ ವಶ

**ಚಳ್ಳಕೆರೆ:** ತಾಲ್ಲೂಕಿನ ದೇವರಮರಿಕುಂಟೆ ಗ್ರಾಮದ ಸಾರ್ವಜನಿಕ ರಸ್ತೆಯಲ್ಲಿ ಹಾಡುಹಗಲೇ ಜೂಜಾಟದಲ್ಲಿ ತೊಡಗಿದ್ದ ಅದೇ ಗ್ರಾಮದ ಮಂಜುನಾಥ(30) ಇತರೆ ಏಳು ಜನರನ್ನು ವಶಕ್ಕೆ ಪಡೆದ ಪೊಲೀಸರು ಜೂಜಾಟದ ಹಣ ಸುಮಾರು 30200ರೂ ವಶಪಡಿಸಿಕೊಂಡಿರುತ್ತಾರೆ. ಖಚಿತ ಮಾಹಿತಿ ಮೇರೆಗೆ ಮುಖ್ಯಪೇದೆ ಎಚ್.ಮಂಜಪ್ಪ, ಠಾಣಾಧಿಕಾರಿ ಖಲದಂರ್‌ಖಾನ್ ಗ್ರಾಮಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಸಾರ್ವಜನಿಕರ ರಸ್ತೆಯಲ್ಲಿ ಜೂಜಾಟವಾಡುತ್ತಿದ್ದ ಎಲ್ಲರನ್ನೂ ವಶಕ್ಕೆ ಪಡೆದು ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

## ತಾಲ್ಲೂಕು ಕಾಡುಗೊಲ್ಲರ ಸಂಘದಿಂದ ಸಿಎಂ ಭೇಟಿ ಇಂದು

**ಚಳ್ಳಕೆರೆ:** ತಾಲ್ಲೂಕು ಕಾಡುಗೊಲ್ಲರ ಸಂಘದ ಅಧ್ಯಕ್ಷರು ಹಾಗೂ ಎಲ್ಲಾ ಪದಾಧಿಕಾರಿಗಳು ಕಾಡುಗೊಲ್ಲ ಸಮುದಾಯಕ್ಕೆ ಜಾತಿಪ್ರಮಾಣ ಪತ್ರ ವಿತರಿಸುವ ವಿಚಾರ ಕುರಿತು ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಲು ಬೆಳಗಾವಿಗೆ ತೆರಳುತ್ತಿರುವುದಾಗಿ ಸಂಘದ ಅಧ್ಯಕ್ಷ ಬೂದಿಹಳ್ಳಿ ರಾಜಣ್ಣ ತಿಳಿಸಿದ್ದಾರೆ. ಅವರು, ಈ ಬಗ್ಗೆ ಪತ್ರಿಕೆಯೊಂದಿಗೆ ಮಾತನಾಡಿ, ಕಾಡುಗೊಲ್ಲರ ಸಂಘದ ಹೋರಾಟ ಹಾಗೂ ಸೌಲಭ್ಯಗಳ ಬಗ್ಗೆ ಚರ್ಚಿಸಲು ಕಾಡುಗೊಲ್ಲರ ಸಂಘದ ರಾಜ್ಯಾಧ್ಯಕ್ಷ ರಾಜಣ್ಣನವರಿಗೆ ಡಿ.11ರ ಸಂಜೆ 6ಕ್ಕೆ ಬೆಳಗಾವಿಯ ವಿಧಾನಸೌಧದಲ್ಲಿ ಭೇಟಿ ಮಾಡಲು ಮುಖ್ಯಮಂತ್ರಿಗಳ ಕಾರ್ಯಾಲಯ ಸೂಚಿಸಿದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಎಸ್.ಸಿದ್ದರಾಮಯ್ಯನವರನ್ನು ಭೇಟಿ ಮಾಡಲು ರಾಜ್ಯಾಧ್ಯಕ್ಷರೂ ಸೇರಿದಂತೆ ಜಿಲ್ಲೆ, ತಾಲ್ಲೂಕಿನ ಎಲ್ಲಾ ಅಧ್ಯಕ್ಷರು ನಿಯೋಗದೊಂದಿಗೆ ತೆರಳಿ ಕಾಡುಗೊಲ್ಲ ಜನಾಂಗದ ಸಮಸ್ಯೆಗಳ ಬಗ್ಗೆ ಮುಖ್ಯಮಂತ್ರಿಗಳಿಗೆ ವಿವರಣೆ ನೀಡಲಾಗುವುದು. ತಾಲ್ಲೂಕಿನ ಕಾಡುಗೊಲ್ಲ ಸಮುದಾಯಕ್ಕೆ ಜಾತಿಪ್ರಮಾಣ ಪತ್ರ ನೀಡುವ ತನಕ ನಮ್ಮ ಹೋರಾಟ ಮುಂದುವರೆಯಲಿದೆ.




## ಫಾಸ್ಟ್ ನ್ಯೂಸ್

### ಮಾನವ ಹಕ್ಕುಗಳ ದಿನಾಚರಣೆ ಇಂದು

» ದಾವಣಗೆರೆ

ನಗರದ ಜಿಲ್ಲಾಡಳಿತ ಭವನದ ತುಂಗಭದ್ರ ಸಭಾಂಗಣದಲ್ಲಿ ಡಿಸೆಂಬರ್ 11 ರಂದು ಬೆಳಿಗ್ಗೆ 11 ಗಂಟೆಗೆ ಮಾನವ ಹಕ್ಕುಗಳ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್ ತಿಳಿಸಿದ್ದಾರೆ.

### ಡಿಸಿ ರವೀಂದ್ರಕುಮಾರ್ ಅಥರ್ಗಾಗೆ ರಾಷ್ಟಮಟ್ಟದ ಪ್ರಶಸ್ತಿ ಪ್ರಧಾನ



» ದಾವಣಗೆರೆ

ಜಿಲ್ಲಾಧಿಕಾರಿಗಳಿಂದ ರವೀಂದ್ರಕುಮಾರ್ ಅಥರ್ಗಾ ಅವರಿಗೆ ರಾಷ್ಟ್ರೀಯ ದಾಖಲೆಯ ಪ್ರಶಸ್ತಿ ಪ್ರಧಾನ. ಚನ್ನಗಿರಿತಾಲ್ಲೂಕಿನಬಿಸಿಎಂಇಲಾಖೆಯತಾಲ್ಲೂಕು ಕಲ್ಯಾಣ ಅಧಿಕಾರಿಯಾಗಿ ಸೇವೆಸ್ನಲ್ಲಿಸುತ್ತಿರುವ ಹವ್ಯಾಸಿ ಗಾಯಕ, ಕನ್ನಡದ ಕುಮಾರ್ ಸಾನು ಖ್ಯಾತಿಯ ರವಿಕುಮಾರ್ ಅಥರ್ಗಾ ಅವರು, ದಿನಾಂಕ 22.10.2023 ರಂದು ವಿಜಯಪುರದ ಕಾರ್ಯಕ್ರಮದಲ್ಲಿ ಸತತವಾಗಿ 65 ಕನ್ನಡ ಹಾಗೂ ಹಿಂದಿ ಚಿತ್ರಗೀತೆಗಳನ್ನು ಹಾಡಿದ್ದರು, ಸುಮಾರು 9.00 ಗಂಟೆಗಳ ವರೆಗೆ ಸತತವಾಗಿ ಹಾಡುವ ಮೂಲಕ ಹಲವಾರು ದಾಖಲೆಗಳಿಗೆ ಭಾಜನರಗುತ್ತಿದ್ದಾರೆ, ಇವರ ಆ ಕಾರ್ಯಕ್ರಮವು ರಾಷ್ಟ್ರೀಯ, ಅಂತರ್ ರಾಷ್ಟ್ರೀಯ, ಎಷ್ಯಾ, ಲಿಂಕಾ ಹಾಗೂ ಗಿನ್ನಿಸ್ ದಾಖಲೆಗಾಗಿ ಸಲ್ಲಿಕೆಯಾಗಿದ್ದು, ದಾಖಲಾತಿ ಪಕ್ರಿಯೆ ಪ್ರಗತಿಯಲ್ಲಿವೆ, ಪ್ರಯುಕ್ತ ಸದರಿ ಅಧಿಕಾರಿಯ ನಿರಂತರ ಗಾಯನಕ್ಕಾಗಿ ಎಲೈಟ್ ಇಂಡಿಯಾ ಬುಕ್ ನಲ್ಲಿ ಇವರ ಹೆಸರು ದಾಖಲೆ ಆದ ಪ್ರಯುಕ್ತ ರವಿಕುಮಾರ್ ಅವರಿಗೆ, ಪ್ರಶಸ್ತಿ ಪತ್ರ, ಮೆಡಲ್ ಹಾಗೂ ನೆನಪಿನ ಕಾಣಿಕೆಯನ್ನು , ದಾವಣಗೆರೆ ಜಿಲ್ಲಾಧಿಕಾರಿಗಳು ಆದ ಡಾ. ವೆಂಕಟೇಶ್ ರವರು ವಿತರಿಸಿದರು. ಈ ವೇಳೆ ಮಲ್ಲಿಕಾರ್ಜುನ ಮಠದ, ಜಿಲ್ಲಾ ಅಧಿಕಾರಿಗಳು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ದಾವಣಗೆರೆ ಹಾಗೂ ಶ್ರೀಮತಿ ರೇಣುಕಾ ಆಯುಕ್ತರು ದಾವಣಗೆರೆ ಮಹಾನಗರ ಪಾಲಿಕೆ ರವರು ಉಪಸ್ಥಿತರಿದ್ದರು.

### ಡಿ.ಗ್ರೂಪ್ ನೌಕರರಾಗಿ ಪರಿಗಣಿಸಲು ಒತ್ತಾಯಿಸಿ ಗ್ರಾಮ ಸಹಾಯಕರಿಂದ ಬೆಳಗಾವಿ ಚಲೋ ಕಾರ್ಯಕ್ರಮ



» ಚಳ್ಳಕೆರೆ

ಕಳೆದ ಸುಮಾರು 40 ವರ್ಷಗಳಿಂದ ತಾಲ್ಲೂಕು ಕಚೇರಿ ಸೇರಿದಂತೆ ಗ್ರಾಮ ಪಂಚಾಯಿತಿಗಳಲ್ಲಿ ಗ್ರಾಮ ಸಹಾಯಕರಾಗಿ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಸಹಾಯಕರನ್ನು ಡಿ.ಗ್ರೂಪ್ ನೌಕರರಾಗಿ ಪರಿಗಣಿಸಲು ಒತ್ತಾಯಿಸಿ ಬೆಳಗಾವಿ ಚಲೋಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದಾಗಿ ತಾಲ್ಲೂಕು ಗ್ರಾಮ ಸಹಾಯಕರ ಸಂಘದ ಅಧ್ಯಕ್ಷ ಎಸ್.ಟಿ.ಸೂರ್ಯಪ್ರಕಾಶ್ ತಿಳಿಸಿದ್ದಾರೆ.

ಅವರು, ಈ ಬಗ್ಗೆ ಮಾಹಿತಿ ನೀಡಿ ರಾಜ್ಯ ಸಂಘದ ಕರೆಯ ಮೇರೆಗೆ ಡಿ.12ರಂದು ಬೆಳಗಾವಿ ಚಲೋ ಕಾರ್ಯಕ್ರಮ ಹಮ್ಮಿಕೊಂಡಿದ್ದು ಬೆಳಗಾವಿಯ ಕಿತ್ತೂರು ರಾಣಿ ಚನ್ನಮ್ಮ ಅರಮನೆಯಿಂದ ಮೆರವಣಿಗೆ ಪ್ರಾರಂಭಿಸಿ ವಿಧಾನಸೌಧ ತಲುಪಿ ಅಲ್ಲಿ ರಾಜ್ಯದ ಮುಖ್ಯಮಂತ್ರಿಗೆ ಮನವಿ ನೀಡಲಾಗುವುದು. ತಾಲ್ಲೂಕಿನ ಎಲ್ಲಾ ಗ್ರಾಮ ಸಹಾಯಕರು ಅಂದು ಪ್ರತಿಭಟನೆಯಲ್ಲಿ ಭಾಗವಹಿಸಲು ಮನವಿ ಮಾಡಲಾಗಿದೆ. ಅದೇ ರೀತಿ ತಾಲ್ಲೂಕು ದಂಡಾಧಿಕಾರಿಗಳು ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ಈಗಾಗಲೇ ಮಾಹಿತಿ ನೀಡಿ, ಅನುಮತಿಯನ್ನು ಸಹ ಕೇಳಲಾಗಿದೆ ಎಂದು ತಿಳಿಸಿದರು. ಗ್ರಾಮ ಸಹಾಯಕ ಸಂಘದ ಪ್ರಧಾನ ಕಾರ್ಯದರ್ಶಿ ಟಿ.ಓಬಯ್ಯ ಸೇರಿದಂತೆ ಎಲ್ಲಾ ಗ್ರಾಮ ಪಂಚಾಯಿತಿಯ ಸಹಾಯಕರು ತಹಶೀಲ್ದಾರ್‌ಗೆ ಅನುಮತಿ ಕೋರಿ ಮನವಿ ಸಲ್ಲಿಸಿದರು.

# ಶಿಕ್ಷಣದ ಜತೆ ಮಕ್ಕಳಿಗೆ ಸಂಸ್ಕಾರ ಕಲಿಸಿ

» ಚಿತ್ರದುರ್ಗ

ವಿದ್ಯಾರ್ಥಿಗಳಿಗೆ ಶಿಕ್ಷಣ ಮತ್ತು ಶಿಕ್ಷಕರಿಂದ ಸಂಸ್ಕಾರ ಬೆಳೆಯಲು ಸಾಧ್ಯವಿದೆ. ಕಲ್ಲುಗಳನ್ನು ಮೂರ್ತಿಗಳನ್ನಾಗಿ ಮಾಡಿದ ಕೀರ್ತಿ ನಿಮಗೆ ಸಲ್ಲುತ್ತದೆ ಎಂದು ವಾಸವಿ ವಿದ್ಯಾಸಂಸ್ಥೆ ಮಾಜಿ ಕಾರ್ಯದರ್ಶಿ ರಾಮಲಿಂಗಶೆಟ್ಟಿ ತಿಳಿಸಿದರು.

ನಗರದ ವಾಸವಿ ವಿದ್ಯಾ ಸಂಸ್ಥೆಯಲ್ಲಿ 1993-94ನೇ ಇಸವಿಯಲ್ಲಿ ಅಭ್ಯಾಸವನ್ನು ಮಾಡಿದ ಹಳೆಯ ವಿದ್ಯಾರ್ಥಿಗಳಿಂದ ವಾಸವಿ ವಿದ್ಯಾ ಸಂಸ್ಥೆಯ ಆವರಣದಲ್ಲಿ ಹಮ್ಮಿಕೊಂಡಿದ್ದ ಗುರುವಂದನಾ ಸಮಾರಂಭದ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಅಂದು ನಮ್ಮ ಬಳಿಯಲ್ಲಿ ಅಭ್ಯಾಸವನ್ನು ಮಾಡಿದ ವಿದ್ಯಾರ್ಥಿಗಳು ಇಂದು ಸಮಾಜದಲ್ಲಿ ವಿವಿಧ ರೀತಿಯಲ್ಲಿ ಉದ್ಯೋಗವನ್ನು ಮಾಡುತ್ತಾ ಬದುಕನ್ನು ನಡೆಸುತ್ತಿದ್ದಾರೆ. ತಾವು ಓದಿದ ಶಾಲೆಯನ್ನು ಮರೆಯದೆ ಇಲ್ಲಿಗೆ ಬಂದು ನಿಮಗೆ ಪಾಠವನ್ನು



ಹೇಳಿಕೊಟ್ಟ ಶಿಕ್ಷಕರನ್ನು ಕರೆಯಿಸಿ ಅವರನ್ನು ಗೌರವಿಸಿದ್ದು ತಂಬಾ ಶ್ಲಾಘನೀಯವಾದ ಕಾರ್ಯವಾಗಿದೆ ಎಂದರು.

ನೀವುಗಳು ಈಗ ದೊಡ್ಡವ ರಾಗಿ ವಿವಿಧ ರೀತಿಯ ಉದ್ಯೋಗ ದಲ್ಲಿದ್ದಿರ, ನಮ್ಮ ಶಾಲೆಯಲ್ಲಿ ಹಲವಾರು ಪ್ರತಿಭಾವಂತ ವಿದ್ಯಾರ್ಥಿಗಳಿದ್ದು ಅವರಿಗೆ ಓದಲು ಇಷ್ಟ ಆದರೆ ಫೀಜನ್ನು ಭರಿಸಲಾಗದೆ ಶಿಕ್ಷಣವನ್ನು ಮೊಟಕುಗೊಳಿಸುತ್ತಿದ್ದಾರೆ ಅಂತಹ ವಿದ್ಯಾರ್ಥಿಗಳ ಸಹಾಯಾರ್ಥ ನೀವುಗಳು ಫಂಡ್‌ನ್ನು ನಿರ್ಮಾಣ ಮಾಡಿ ಅವರ ಶಿಕ್ಷಣಕ್ಕೆ ದಾರಿಯಾಗಿ ಎಂದು ಮನವಿ ಮಾಡಿದ ಅವರು, ನಮ್ಮ ವಾಸವಿ ಶಾಲೆ ತಾಯಿಯ ಹೆಸರಿನಲ್ಲಿ ಪ್ರಾರಂಭವಾಗಿ ನಡೆಯುತ್ತಿದೆ ಇಲ್ಲಿ ಓದಿದವರೆಲ್ಲಾ ಉನ್ನತ ಹುದ್ದೆಯಲ್ಲಿದ್ದಾರೆ. ಸಮಾಜದ ಸೇವೆಯನ್ನು ಮಾಡುತ್ತಿದ್ದಾರೆ. ರಾಜಕೀಯದಲ್ಲಿರುವವರು ಮುಂದಿನ ದಿನಮಾನದಲ್ಲಿ ಉನ್ನತವಾದ ಹುದ್ದೆಯನ್ನು ಪಡೆಯುವುದರ ಮೂಲಕ ಶಾಲೆಗೆ ಜಿಲ್ಲೆಗೆ ಹೆಸರನ್ನು ತರುವಂತೆ ಹೇಳಿದರು.

1993-94ನೇ ಬ್ಯಾಚ್ ಉತ್ತಮವಾದ ಬ್ಯಾಚ್ ಆಗಿತ್ತು ಓದಿನಲ್ಲಿಯೂ ಸಹಾ ಮುಂದೆ ಇದ್ದು ಯಾವುದೇ ಕ್ರೀಡಾಕೂಟಕ್ಕೆ ಹೋದರು ಸಹಾ ಪದಕವನ್ನು ತೆಗೆದುಕೊಂಡೇ ಬರುತ್ತಿದ್ದರು, ಶಾಲೆ ಎಂದ ಮೇಲೆ ತರಲೇ ಕೀಟಲೇ ಇದ್ದೇ ಇರುತ್ತವೆ ಅವುಗಳನ್ನು ಮೀರಿ ಸಹಾ ಉತ್ತಮವಾದ ಭಾಂಧವ್ಯವನ್ನು ನೀವುಗಳು ಹೊಂದಿದ್ದಾರೆ ನಿಮ್ಮ ಈ ಗೆಳತನ ಹೀಗೇಯೇ ಮುಂದುವರೆಯಲಿ ಎಂದು ರಾಮಲಿಂಗಾಶೆಟ್ಟಿ ಆಶಿಸಿದರು. ಕಾರ್ಯಕ್ರ ಮದಲ್ಲಿ ಶಿಕ್ಷಕಿರಾದ ವಿಜಯ ಮಧುಕರ್, ಮಾಯಾವತಿ, ಕುಮುದಾ, ಶೋಭಾ, ಹೇಮಾ, ಶೈಲಜ, ವಿಮಲ, ಸರಸ್ವತಿ, ಲೀಲಾವತಿ, ಸೇರಿದಂತೆ ಇತರರು ಭಾಗವಹಿಸಿದ್ದರು. 93-94ನೇ ಸಾಲಿನ ವಿದ್ಯಾರ್ಥಿಗಳಾದ ಸುಭಾಷ್, ನರೇಂದ್ರ ಸುರೇಶ್, ಹರ್ಷ, ಉಮೇಶ್, ಅಂಬುಜ, ಯೋಗಿತಾ ಉಪಸ್ಥಿತರಿದ್ದರು.

# ಬೆಂಗಳೂರು ವಿಭಾಗ ಮಟ್ಟದ ಸಾಂಸ್ಕೃತಿಕ ಸ್ಪರ್ಧೆ

» ಚಿತ್ರದುರ್ಗ

ವಿದ್ಯಾರ್ಥಿಯ ಪರಿಪೂರ್ಣತೆ ಹಾಗೂ ವಿಕಾಸನಕ್ಕೆ ಪಠ್ಯ ಸಹಿತ ಪಠ್ಯೇತರ ಚಟುವಟಿಕೆಗಳು ಪೂರಕವಾಗುತ್ತವೆ. ಹೀಗಾಗಿ ಪ್ರತಿ ವಿದ್ಯಾರ್ಥಿಯು ತರಗತಿಯ ಕಲಿಕೆಯ ಜೊತೆಗೆ ತನ್ನಲ್ಲಿ ಅಡಗಿರುವ ಪ್ರತಿಭೆಯನ್ನು ಹೊರಹಾಕಲು ಇಂತಹ ವೇದಿಕೆಗಳು ತುಂಬಾ ಸಹಕಾರಿ ಎಂದು ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಆರ್ ಪುಟ್ಟಸ್ವಾಮಿ ತಿಳಿಸಿದರು.

ನಿರ್ದೇಶಕರ ಕಚೇರಿ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಬೆಂಗಳೂರು, ಉಪ ನಿರ್ದೇಶಕರ ಕಚೇರಿ ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಚಿತ್ರದುರ್ಗ, ಕರ್ನಾಟಕ ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ನಿಧಿ ಹಾಗೂ ಎಸ್ ಆರ್ ಎಸ್ ಪದವಿ ಪೂರ್ವ ಕಾಲೇಜ್ ಚಿತ್ರದುರ್ಗ ಇವರ ಸಹಯೋಗದಲ್ಲಿ ಎಸ್ ಆರ್ ಎಸ್ ಪದವಿ ಪೂರ್ವ ಕಾಲೇಜಿನ ಅನಂತ ಕೃಷ್ಣ ವೇದಿಕೆಯಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಬೆಂಗಳೂರು ವಿಭಾಗ ಮಟ್ಟದ 2023-24ನೇ ಸಾಲಿನ ಸಾಂಸ್ಕೃತಿಕ ಸ್ಪರ್ಧೆಗಳನ್ನು ಉದ್ಘಾಟಿಸಿ ಮಾತನಾಡಿದರು. ಪದವಿ ಪೂರ್ವ ಶಿಕ್ಷಣ ಇಲಾಖೆ ಪ್ರತಿ ವರ್ಷವೂ ಕ್ರೀಡೆ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಿ ಮಕ್ಕಳಲ್ಲಿ ಸ್ಪರ್ಧಾ ಮನೋಭಾವನೆಯನ್ನು ಮೂಡಿಸುವಲ್ಲಿ




ಮುಂದಾಗಿದೆ. ಸೋಲು ಗೆಲುವಿಗಿಂತಲೂ ಸ್ಪರ್ಧೆಯಲ್ಲಿ ಭಾಗವಹಿಸುವುದು ವಿದ್ಯಾರ್ಥಿಗಳಿಗೆ ಮುಖ್ಯವಾಗಬೇಕಿದೆ. ಯಾಕೆಂದರೆ ಭವಿಷ್ಯದ ಬದುಕಿನಲ್ಲಿ ಬರುವ ಕಷ್ಟ ಸುಖಗಳನ್ನು ಸಮಾನಾಗಿ ಸ್ವೀಕರಿಸುವ ಸಾಮರ್ಥ್ಯವನ್ನು ಈ ಸ್ಪರ್ಧಾ ವೇದಿಕೆಗಳು ಒದಗಿಸುತ್ತವೆ ಎಂದು ತಿಳಿಸಿದರು.

ಸಭೆಯ ಅಧ್ಯಕ್ಷತೆಯನ್ನು ಎಸ್ ಆರ್ ಎಸ್ ಸಮೂಹ ಶಿಕ್ಷಣ ಸಂಸ್ಥೆಯ ರವಿಕುಮಾರ್ ವಹಿಸಿದ್ದರು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ನಿವೃತ್ತ ಉಪ ನಿರ್ದೇಶಕರಾದ ಕೆ. ವೀರಭದ್ರಪ್ಪ, ಸಂಗೀತ ವಿದ್ವಾನ್ ದ್ವಾರಕೇಶ್, ನಿವೃತ್ತ ಪ್ರಾಂಶುಪಾಲರಾದ ಜಂಬುನಾಥ್, ಪ್ರಾಚಾರ್ಯರ ಸಂಘದ ಅಧ್ಯಕ್ಷರಾದ ಎಲ್. ರಂಗಪ್ಪ, ಉಪನ್ಯಾಸಕರ ಸಂಘದ ಜಿಲ್ಲಾಧ್ಯಕ್ಷರಾದ ಬಿ.ಆರ್ ಮಲ್ಲೇಶ್ ಕಾರ್ಯದರ್ಶಿ ಕೆ. ನಾಗರಾಜ್, ಖಜಾಂಚಿಗಳಾದ ಎಮ್ ರವೀಶ್, ಕಾರ್ಯಧ್ಯಕ್ಷರಾದ ಜಿ.ಎಸ್. ತಿಪ್ಪೇಸ್ವಾಮಿ ಉಪನ್ಯಾಸಕರ ಸಂಘದ ಕಾರ್ಯದರ್ಶಿಗಳಾದ ಎ.ಕಾಂತರಾಜ್ ಪ್ರಾಚಾರ್ಯರಾದ ಕೆ. ನಾಗಣ್ಣ, ಗಂಗಾಧರ್, ಜಬಿವುಲ್ಲಾ, ಕೆ.ಎಚ್ .ರಾಜು ಮುಂತಾದವರು ಉಪಸ್ಥಿತರಿದ್ದರು.

# ಗುಂಜಿಗನೂರು ಗ್ರಾಮದಲ್ಲಿ ರಾಜ್ಯ ಮಟ್ಟದ ಕಬಡ್ಡಿ ಪಂದ್ಯಾ



» ಹೊಳಲ್ಕೆರೆ

ಯಾವುದೇ ಕ್ರೀಡೆಯಲ್ಲಿ ಸೋಲು-ಗೆಲುವು ಮುಖ್ಯವಲ್ಲ. ಕ್ರೀಡಾ ಮನೋಭಾವದಿಂದ ಆಡಬೇಕೆಂದು ಹೊಳಲ್ಕೆರೆ ಶಾಸಕ ಡಾ.ಎಂ. ಚಂದ್ರಪ್ಪ ಕಬಡ್ಡಿ ಪಟುಗಳಿಗೆ ಕರೆ ನೀಡಿದರು. ಹೊಳಲ್ಕೆರೆ ತಾಲ್ಲೂಕಿನ ಗುಂಜಿಗನೂರು ಗ್ರಾಮದಲ್ಲಿ ದೀಪಾವಳಿ ಪ್ರಯುಕ್ತ ನಡೆದ ರಾಜ್ಯ ಮಟ್ಟದ ಒಂದು ದಿನದ ಕಬಡ್ಡಿ ಪಂದ್ಯಾವಳಿ ಉದ್ಘಾಟಿಸಿ ಮಾತನಾಡಿದರು. ನಮ್ಮ ರಾಜ್ಯ ಮತ್ತು ದೇಶದಲ್ಲಿ ಕಬಡ್ಡಿಗೆ ವಿಶೇಷ ಮಹತ್ವವಿದೆ. ಶಾಲಾ-ಕಾಲೇಜಿನಲ್ಲಿ ಓದುವಾಗ ನಾನು ಕೂಡ ಉತ್ತಮ ಕಬಡ್ಡಿ ಪಟುವಾಗಿದ್ದೆ. ಪ್ರತಿ ಕ್ಷಣ ಕ್ಷಣಕ್ಕೂ ಕಬಡ್ಡಿಯಲ್ಲಿ ಜಾಣ್ಮೆ ಮುಖ್ಯ. ದೈಹಿಕವಾಗಿ ಸದೃಢವಾಗಿರಬೇಕಾದರೆ ಕಬಡ್ಡಿ ಸಹಕಾರಿ ಎಂದು ಹೇಳಿದರು. ವರ್ಲ್ಡ್ ಕಪ್ ಕ್ರಿಕೆಟ್ ಫೈನಲ್‌ನಲ್ಲಿ ಭಾರತ ಆಸ್ಟ್ರೇಲಿಯಾ ವಿರುದ್ದ ಸೋತಾಗ ನಮ್ಮ ದೇಶದ ಪ್ರಧಾನಿ ನರೇಂದ್ರಮೋದಿ ಆಟಗಾರರ ಬಳಿ ಹೋಗಿ ನೀವು ಫೈನಲ್‌ನಲ್ಲಿ ಸೋತಿರಬಹುದು. ಆದರೆ ಭಾರತೀಯರ ವಿಶ್ವಾಸ ಗಳಿಸುವಲ್ಲಿ ಸೋತಿಲ್ಲ ಎನ್ನುವ ಆತ್ಮಸ್ಥೈರ್ಯದ ಮಾತುಗಳನ್ನಾಡಿದರು. ಸೋತವರು ನಿರಾಸೆಯಾಗುವುದು ಬೇಡ. ಮುಂದೆ ಚೆನ್ನಾಗಿ ಆಡಿ ಗೆಲ್ಲಿರಿ ಎಂದು ಹಾರೈಸಿದರು.

# ತಾಲ್ಲೂಕಿನ ಶೈಕ್ಷಣಿಕ ಪ್ರಗತಿಯಲ್ಲಿ ಖಾಸಗಿ ವಿದ್ಯಾಸಂಸ್ಥೆಗಳ ಕೊಡುಗೆ ಅಪಾರ

» ಚಳ್ಳಕೆರೆ

ತಾಲ್ಲೂಕಿನ ಶೈಕ್ಷಣಿಕ ಪ್ರಗತಿಯಲ್ಲಿ ಖಾಸಗಿ ವಿದ್ಯಾಸಂಸ್ಥೆಗಳ ಪಾತ್ರವೂ ಸಹ ತೃಪ್ತಿಯಾಗಿದ್ದು, ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ನೀಡುವ ನಿಟ್ಟಿನಲ್ಲಿ ಖಾಸಗಿ ಶಾಲೆಗಳೂ ಸಹ ಜವಾಬ್ದಾರಿಯುತ್ತವಾಗಿ ಕಾರ್ಯನಿರ್ವಹಿಸುತ್ತಿವೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು.

ಅವರು, ತಾಲ್ಲೂಕಿನ ತಳಕು ಗ್ರಾಮದಲ್ಲಿ ವೆಂಕಣಯ್ಯ ವಿದ್ಯಾಸಂಸ್ಥೆಯ ಮಾರುತಿ ಹಿರಿಯ ಪ್ರಾಥಮಿಕ ಶಾಲೆ ನೂತನ ಕಟ್ಟಡ ಪ್ರಾರಂಭೋತ್ಸವ ಹಾಗೂ ವಸ್ತು ಪ್ರದರ್ಶನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ವಸ್ತು ಪ್ರದರ್ಶನ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಹಲವಾರು ನೂತನ ಮಾದರಿಗಳನ್ನು ತಯಾರಿಸಿ ಪ್ರದರ್ಶಿಸಿದ್ದಾರೆ. ವಿಜ್ಞಾನದಲ್ಲೂ ಮಕ್ಕಳ ಜಾಗೃತಿ ಕಂಡು ಸಂತಸವಾಗಿದೆ. ಮಾರುತಿ ಹಿರಿಯ ಪ್ರಾಥಮಿಕ ಶಾಲೆಯೂ ಸಹ ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಗೌರವವನ್ನು ತಂದುಕೊಡಲಿ ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ



ಪಾಲ್ಗೊಂಡು ಮಾತನಾಡಿದ ಬಳ್ಳಾರಿ ಮಕ್ಕಳ ಮತ್ತು ಮಹಿಳಾ ಕಲ್ಯಾಣ ಇಲಾಖೆ ಉಪನಿರ್ದೇಶಕ ವಿಜಯಕುಮಾರ್, ಗ್ರಾಮೀಣ ಭಾಗದ ಶಾಲೆಗಳಲ್ಲೂ ಸಹ ಉತ್ತಮ ಶಿಕ್ಷಣ ದೊರೆಯುತ್ತಿದೆ. ಹಲವಾರು ರಾಜ್ಯಮಟ್ಟದ ಅಧಿಕಾರಿಗಳು ಗ್ರಾಮೀಣ ಪ್ರದೇಶದ ಶಾಲೆಗಳಲ್ಲೇ ವಿದ್ಯಾಭ್ಯಾಸ ಮಾಡಿದವರು. ಗ್ರಾಮೀಣ ಭಾಗದ ಶಾಲೆಗಳು ಎಂದಕೂಡಲೇ ಯಾರೂ ನಿರ್ಲಕ್ಷ್ಯವಹಿಸದೆ ಮಕ್ಕಳನ್ನು ಹಿತದೃಷ್ಟಿಯಿಂದ ಉತ್ತಮ ಶಿಕ್ಷಣವನ್ನು ಕೊಡಿಸುವಲ್ಲಿ ಮುಂದಾಗಬೇಕು ಎಂದರು.

ಮದಕರಿ ವಿದ್ಯಾಸಂಸ್ಥೆ ಅಧ್ಯಕ್ಷ ಎಸ್.ಸಂದೀಪ್ ಮಾತನಾಡಿ, ಕಳೆದ ಹಲವಾರು ದಶಕಗಳಿಂದ ಖಾಸಗಿ ಶಾಲೆಗಳ ನಿರ್ವಹಣೆಯಲ್ಲಿ ಹೆಚ್ಚು ಶ್ರಮವಹಿಸಿದ ವಿದ್ಯಾರ್ಥಿಗಳು ಉತ್ತಮ ಫಲಿತಾಂಶ ತಂದಾಗ ಸಂತಸವಾಗಲಿದೆ. ಯಾವುದೇ ಶಾಲೆ ಇರಲಿ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿ ಅತಿಮುಖ್ಯವೆಂದರು. ಕಾರ್ಯಕ್ರಮದಲ್ಲಿ ನಗರಸಭಾ ಸದಸ್ಯ ಆರ್. ರುದ್ರನಾಯಕ, ಸರ್ಕಾರಿ ನೌಕರರ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಸಿ.ಟಿ.ವೀರೇಶ್, ಮಾಜಿ ತಾಲ್ಲೂಕು ಪಂಚಾಯಿತಿ ಸದಸ್ಯ ಸಮರ್ಥರಾಯ, ಬಿಇಒ ಕೆ.ಎಸ್.ಸುರೇಶ್‌ರವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವೆಂಕಣಯ್ಯ ವಿದ್ಯಾಸಂಸ್ಥೆಯ ಅಧ್ಯಕ್ಷ ಬೈಯಣ್ಣ ವಹಿಸಿದ್ದರು. ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯೋಪಾಧ್ಯಾಯ ಬಿ.ಸುರೇಶ್, ಕಾರ್ಯದರ್ಶಿ ಎನ್.ನೇತ್ರಾವತಿ, ನಿವೃತ್ತ ಬ್ಯಾಂಕ್ ಅಧಿಕಾರಿ ಸೂರನಾಯಕ, ಜಿ.ಗೋವಿಂದಪ್ಪ, ಮಹಂತೇಶ್, ಎಚ್.ಓ.ರಾಜಣ್ಣ ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

# ಕಾಂಗ್ರೆಸ್ ಪಕ್ಷದ ತತ್ವ ಸಿದ್ಧಾಂತ ಪಾಲಿಸೋಣ

» ಚಿತ್ರದುರ್ಗ

ಕಾಂಗ್ರೆಸ್ ಪಕ್ಷಕ್ಕೆ ನೂರಾರು ವರ್ಷಗಳ ಇತಿಹಾಸವಿದೆ. ನೆಹರು, ಇಂದಿರಾಗಾಂಧಿ, ರಾಜೀವ್‌ಗಾಂಧಿರವರ ಕೊಡುಗೆ ಅಪಾರವಾಗಿದೆ ಎಂದು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಸ್ಪರ್ಧಾಕಾಂಕ್ಷಿ ಪಾವಗಡದ ಹೆಚ್.ವಿ.ಕುಮಾರಸ್ವಾಮಿ ತಿಳಿಸಿದರು.

ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಕಾಂಗ್ರೆಸ್ ಸೋನಿಯಾಗಾಂಧಿರವರ ಹುಟ್ಟುಹಬ್ಬ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷಕ್ಕೆ ನೂರಾರು ವರ್ಷಗಳ ಇತಿಹಾಸವಿದೆ. ನೆಹರು, ಇಂದಿರಾಗಾಂಧಿ, ರಾಜೀವ್‌ಗಾಂಧಿರವರ ಕೊಡುಗೆ ಅಪಾರ. ಹದಿನೆಂಟು ವರ್ಷಗಳ ಕಾಲ ಸೋನಿಯಾಗಾಂಧಿ ಪಕ್ಷದ ಸಾರಥ್ಯ ವಹಿಸಿ ಮುನ್ನಡೆಸಿಕೊಂಡು ಹೋಗಿದ್ದು ಸುಲಭವಲ್ಲ. ದೇಶಕ್ಕೆ ಸ್ವಾತಂತ್ರ್ಯ ತಂದು ಕೊಟ್ಟಕಾಂಗ್ರೆಸ್ ಪಕ್ಷದ ತತ್ವಸಿದ್ಧಾಂತಗಳನ್ನು ಕಾರ್ಯಕರ್ತರು ಮೈಗೂಡಿಸಿಕೊಳ್ಳಬೇಕು ಎಂದು ತಿಳಿಸಿದರು.




ಕೆ.ಪಿ.ಸಿ.ಸಿ. ಕುಶಲಕರ್ಮಿಗಳ ವಿಭಾಗದ ರಾಜ್ಯಾಧ್ಯಕ್ಷ ಆರ್.ಪ್ರಸನ್ನಕುಮಾರ್ ಮಾತನಾಡಿ, ಸೋನಿಯಾಗಾಂಧಿ ಕೊಡುಗೆ ದೇಶಕ್ಕೆ ಅಪಾರ. ಅತ್ತೆ. ಗಂಡನನ್ನು ಕಳೆದುಕೊಂಡರೂ ಎದೆಗುಂದದೆ ಪಕ್ಷವನ್ನು ಪುನಶ್ಚೇತನ ಗೊಳಿಸುವಲ್ಲಿ ಹಿಂದೆ ಬೀಳಲಿಲ್ಲ. ಇನ್ನೇನು ನಾಲ್ಕೈದು ತಿಂಗಳಲ್ಲಿ ನಡೆಯುವ ಪಾರ್ಲಿಮೆಂಟ್ ಚುನಾವಣೆಯಲ್ಲಿ ಪಕ್ಷದ ಗೆಲುವಿಗೆ ಕಾರ್ಯಕರ್ತರು ಈಗಿನಿಂದಲೇ ಶ್ರಮಿಸುವಂತೆ ಮನವಿ ಮಾಡಿದರು.

ಮಹಿಳಾ ಕಾಂಗ್ರೆಸ್ ಮಾಜಿ ಅಧ್ಯಕ್ಷ ಪಿ.ಕೆ.ಮೀನಾಕ್ಷಿ ಮಾತನಾಡುತ್ತ, ಸೋನಿಯಾಗಾಂಧಿ ಭಾರತಕ್ಕೆ ಮಾದರಿ ಮಹಿಳೆಯಾಗಿದ್ದಾರೆ. ಎಲ್ಲವನ್ನು ಕಳೆದುಕೊಂಡ ಆತಂಕದ ಸಂದರ್ಭದಲ್ಲಿ ಭಾರತವನ್ನು ತೊರೆದು ತವರು ದೇಶಕ್ಕೆ ಹೋಗಲಿಲ್ಲ. ತ್ಯಾಗಮಯಿ ಸೋನಿಯಾರವರ ಕೈಬಲಪಡಿಸಬೇಕಾಗಿರುವುದರಿಂದ ಲೋಕಸಭಾ ಚುನಾವಣೆಯಲ್ಲಿ ಪಕ್ಷಕ್ಕೆ ಗೆಲುವು ತಂದುಕೊಡುವ ಜವಾಬ್ದಾರಿ ಪ್ರತಿಯೊಬ್ಬ ಕಾರ್ಯಕರ್ತರ ಮೇಲಿದೆ ಎಂದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ. ತಾಜ್‌ಪೀರ್ ಮಾತನಾಡಿ, ಅತ್ತೆ ಇಂದಿರಾಗಾಂಧಿ, ಪತಿ ರಾಜೀವ್‌ಗಾಂಧಿಯ ಹತ್ಯೆಯಾದಂತ ಆತಂಕದ ಸ್ಥಿತಿಯಲ್ಲಿ ಸೋನಿಯಾಗಾಂಧಿ ಭಾರತವನ್ನು ಬಿಟ್ಟು ತನ್ನ ತವರು ಇಟಲಿಗೆ ಹೋಗಲಿಲ್ಲ. ಎ.ಐ.ಸಿ.ಸಿ. ಅಧ್ಯಕ್ಷ ಸ್ಥಾನ ವಹಿಸಿಕೊಳ್ಳುವ ಮುನ್ನಾ ಸೋನಿಯಾಗಾಂಧಿ ಚಿತ್ರದುರ್ಗಕ್ಕೆ ಆಗಮಿಸಿ ಮಾಜಿ ಮುಖ್ಯಮಂತ್ರಿ ಎಸ್.ನಿಜಲಿಂಗಪ್ಪನವರ ಜೊತೆ ಚರ್ಚಿಸಿ ಹೋಗಿದ್ದರು. ಪ್ರಧಾನಿಯಾಗುವ ಅವಕಾಶ ಸಿಕ್ಕರೂ ಆಸೆ ಪಡದೆ ಮನಮೋಹನ್‌ಸಿಂಗ್‌ರನ್ನು ದೇಶದ ಪ್ರಧಾನಿಯನ್ನಾಗಿ ಮಾಡಿ ಪಕ್ಷಕ್ಕಾಗಿ ಎಲ್ಲವನ್ನು ತ್ಯಾಗ ಮಾಡಿ ಮಾದರಿ ಮಹಿಳೆ ಎನಿಸಿಕೊಂಡಿದ್ದಾರೆಂದು ಹೇಳಿದರು.

## ಫಾಸ್ಟ್ ನ್ಯೂಸ್

### ಸುಸಜ್ಜಿತವಾದ ಬಾಡಿಗೆ ಕಟ್ಟಡಕ್ಕಾಗಿ ಅರ್ಜಿ ಆಹ್ವಾನ

» ದಾವಣಗೆರೆ

ದಾವಣಗೆರೆ ತಾಲ್ಲೂಕು ವ್ಯಾಪ್ತಿಯಲ್ಲಿ ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿ ನಿಲಯ-1, ಹೆಚ್.ಐ.ಸಿ-1912. ಇಲ್ಲಿನ ವಿದ್ಯಾರ್ಥಿ ನಿಲಯ ನಡೆಸಲು ಕನಿಷ್ಠ 900 ಚ.ಮೀ ವಿಸ್ತೀರ್ಣವುಳ್ಳ ಸುಸಜ್ಜಿತವಾದ ಹೆಚ್ಚುವರಿ ಬಾಡಿಗೆ ಕಟ್ಟಡಕ್ಕಾಗಿ ಅಗತ್ಯ ಮೂಲಭೂತ ಸೌಕರ್ಯವಿರುವ ಕಟ್ಟಡದ ಮಾಲೀಕರು ಅಗತ್ಯ ದಾಖಲೆಗಳೊಂದಿಗೆ ಡಿ.18 ರೊಳಗಾಗಿ ಅಂಚೆ ಮೂಲಕ ಅಥವಾ ಖುದ್ದಾಗಿ ಜಿ.ಮಲ್ಲಿಕಾರ್ಜುನಪ್ಪ ದ್ವಿಫಥ ರಸ್ತೆ,(ಹೊಸ ರಿಂಗ್ ರಸ್ತೆ), ಶ್ರೀಮತಿ ರತ್ನಮ್ಮ ತೆಲಗಿ ಸಿದ್ದೇಶಿ ರೆಸಿಡೆನ್ಸಿಯಲ್ ಲೇ ಔಟ್, ಶ್ರೀದೇವರಾಜ ಅರಸು ಭವನ ದಾವಣಗೆರೆ ಇಲ್ಲಿಗೆ ಸಲ್ಲಿಸಲು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲ್ಲೂಕು ಕಲ್ಯಾಣಾಧಿಕಾರಿ ಪುಷ್ಪಾ.ಎಸ್ ಗಡ್ಡಿ ತಿಳಿಸಿದ್ದಾರೆ.

### ವಿ.ಆರ್.ಡಬ್ಲ್ಯೂ ಹುದ್ದೆಗೆ ವಿಕಲಚೇತನ ಅಭ್ಯರ್ಥಿಗಳಿಂದ ಅರ್ಜಿ

» ದಾವಣಗೆರೆ

ವಿಕಲಚೇತನರ ಗ್ರಾಮೀಣ ಪುನರ್ವಸತಿ ಯೋಜನೆಯಡಿ ಜಿಲ್ಲೆಯ ನ್ಯಾಮತಿ ತಾಲ್ಲೂಕಿನ ಕುಂಕುವ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ (ವಿ.ಆರ್.ಡಬ್ಲ್ಯೂ) ಹುದ್ದೆಗೆ ವಿಕಲಚೇತನ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.
ಮಾಸಿಕ ರೂ.9,000 ಗೌರವಧನ ಆಧಾರದ ಮೇಲೆ ಕೆಲಸ ಮಾಡಲು ಆಸಕ್ತರಿರುವ 18 ರಿಂದ 45 ವರ್ಷದ ವಯೋಮಾನದವರಾಗಿರಬೇಕು. ಎಸ್.ಎಸ್.ಎಲ್.ಸಿ ಉತ್ತೀರ್ಣ ಅಥವಾ ಅನುತ್ತೀರ್ಣರಾದ ವಿಕಲಚೇತನ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಕುಂಕುವ ಪಂಚಾಯಿತಿಯ ವ್ಯಾಪ್ತಿಯಲ್ಲಿ ವಾಸವಿರುವ ವಿಕಲಚೇತನ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುವುದು. ಅರ್ಜಿ ಸಲ್ಲಿಸಲು ಡಿ. 26 ಕೊನೆಯ ದಿನವಾಗಿರುತ್ತದೆ. ಅರ್ಜಿ ಹಾಗೂ ಇತರೆ ಮಾಹಿತಿಗಾಗಿ ಜಿಲ್ಲಾ ಕಛೇರಿ ದೂ.ಸಂ.08192 263939 ಹಾಗೂ ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರು ಹೊನ್ನಾಳಿ, ಮೊ. 9886366809 ಗೆ ಸಂಪರ್ಕಿಸಲು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿ ಡಾ.ಕೆ.ಕೆ ಪ್ರಕಾಶ್ ತಿಳಿಸಿದ್ದಾರೆ.

### 17 ರಿಂದ ಶ್ರೀ ಅನ್ನಪೂರ್ಣೇಶ್ವರಿ ವ್ರತ

» ಹಿರಿಯೂರು

ತಾಲ್ಲೂಕು ಕಛೇರಿ ಹಿಂಭಾಗದಲ್ಲಿರುವ ಶ್ರೀ ಅನ್ನಪೂರ್ಣೇಶ್ವರಿ ದೇವಸ್ಥಾನದಲ್ಲಿ ಇದೇ 17 ರ ಮಾರ್ಗಶಿರ ಮಾಸ ಶುದ್ಧ ಪಂಚಮಿ ಭಾನುವಾರದಿಂದ ಪ್ರಾರಂಭವಾಗಿ ಜನವರಿ 08-2024 ರ ಸೋಮವಾರದವರೆಗೆ ಒಟ್ಟು 23 ದಿನಗಳ ಕಾಲ ಪ್ರತಿದಿನ ಸಂಜೆ 6 ರಿಂದ ರಾತ್ರಿ 8.30 ರವರೆಗೆ ಶ್ರೀ ಮಾತಾ ಶ್ರೀ ಅನ್ನಪೂರ್ಣೇಶ್ವರಿ ವ್ರತ ಮಹಾತ್ಮೆಯ ಪಠನೆಯನ್ನು ಮಾಡಿ, ಸ್ವಲ್ಪ ಕಾಲದವರೆಗೆ ಶ್ರೀ ಮಾತಾ ಶ್ರೀ ಅನ್ನಪೂರ್ಣೇಶ್ವರಿ ಮಹಾಮಂತ್ರ ಮತ್ತು ಶಿವಪಂಚಾಕ್ಷರಿ ಮಹಾಮಂತ್ರ ಜಪದ ನಂತರ ಮಹಾ ಮಂಗಳಾರತಿಯೊಂದಿಗೆ ಪ್ರಸಾದವಿನಯೋಗದೊಂದಿಗೆಶ್ರೀಅನ್ನಪೂರ್ಣೇಶ್ವರಿ ವ್ರತವು ಪ್ರತಿ ದಿನ ಪೂರ್ಣವಾಗುತ್ತದೆ.ಆದ್ದರಿಂದ ಭಕ್ತ ಮಹಾಶಯರು ಶ್ರೀ ಮಾತಾ ಶ್ರೀ ಅನ್ನಪೂರ್ಣೇಶ್ವರಿ ವ್ರತಕ್ಕೆ ಎಲ್ಲರೂ 23 ದಿನಗಳ ಕಾಲದವರೆಗೆ ತಪ್ಪದೇ ಭಾಗವಹಿಸಿ ಶ್ರೀ ಮಾತಾ ಶ್ರೀ ಅನ್ನಪೂರ್ಣೇಶ್ವರಿ ಅಮ್ಮನವರ ಕೃಪೆಗೆ ಪಾತ್ರರಾಗಲು ಸಂಸ್ಥಾಪಕರಾದ ಎಚ್ ಜಿ ಹಿಮಂತರಾಜು ಮನವಿ ಮಾಡಿದ್ದಾರೆ.

### ಹೆಚ್‌ಎಎಲ್ ಬೆಂಗಳೂರಿನಲ್ಲಿ ಅಪ್ರೆಂಟಿಸ್ ತರಬೇತಿ: ಅರ್ಜಿ ಆಹ್ವಾನ

» ತುಮಕೂರು

ಹೆಚ್.ಎ.ಎಲ್. ಬೆಂಗಳೂರಿನಲ್ಲಿ ವಿವಿಧ ಟ್ರೇಡ್‌ನಲ್ಲಿ ಐ.ಟಿ.ಐ. ತರಬೇತಿ ಪಡೆದ ಅಭ್ಯರ್ಥಿಗಳಿಗೆ ಅಪ್ರೆಂಟಿಸ್ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಯಲ್ಲಿ Fitter, Turner, Machinist, Welder, COPA, Foundryman and Sheet Metal Worker, Carpenter, Mechanic R & AC, Tool and Die maker and Advanced CNC Machine ಟ್ರೇಡ್‌ನಲ್ಲಿ ಐ.ಟಿ.ಐ. ಪಾಸಾದ ಅಭ್ಯರ್ಥಿಗಳು ಡಿಸೆಂಬರ್ 28ರೊಳಗಾಗಿ ಹೆಸರನ್ನು ನೋಂದಾಯಿಸಿಕೊಂಡು ಉಚಿತವಾಗಿ ಅರ್ಜಿ ನಮೂನೆ ಪಡೆದು ಭರ್ತಿ ಮಾಡಿದ ಅರ್ಜಿಯೊಂದಿಗೆ ಭಾವಚಿತ್ರ, ಎಸ್.ಎಸ್‌ಎಲ್.ಸಿ. ಮತ್ತು ಐ.ಟಿ.ಐ. ಅಂಕ ಪಟ್ಟಿ ಹಾಗೂ ಆಧಾರ್‌ಕಾರ್ಡ್ ಪ್ರತಿ ಹಾಗೂ ಮೀಸಲಾತಿ ಪ್ರಮಾಣ ಪತ್ರ SC/ST/OBC/PH ಗಳನ್ನು ಲಗತ್ತಿಸಿ ಸಲ್ಲಿಸಬೇಕು. ಅರ್ಜಿಗಳನ್ನು ಸಲ್ಲಿಸುವ ಮುನ್ನ www.apprenticeship.gov.in ನಲ್ಲಿ ಕಡ್ಡಾಯವಾಗಿ ಅಪ್ರೆಂಟಿಸ್ ನೋಂದಣಿ ಮಾಡಿಕೊಂಡು ನಂತರ ಅರ್ಜಿ ಸಲ್ಲಿಸುವುದು. ಸದರಿ ಅರ್ಜಿಗಳನ್ನು ಹೆಚ್.ಎ.ಎಲ್ ಬೆಂಗಳೂರಿಗೆ ಕಳುಹಿಸಲಾಗುವುದು.ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ತುಮಕೂರು ದೂರವಾಣಿ ಸಂ: 0816-2278488ನ್ನು ಸಂಪರ್ಕಿಸಬಹುದಾಗಿದೆ

# ಚಿತ್ರದುರ್ಗ ಕ್ಷೇತ್ರಕ್ಕೆ ನಾನು ಅಕಾಂಕ್ಷಿ: ಕುಮಾರಸ್ವಾಮಿ

» ಚಿತ್ರದುರ್ಗ

ಕಾಂಗ್ರೆಸ್ ಪಕ್ಷ ಚಿತ್ರದುರ್ಗ ಲೋಕಸಭಾ ಚುನಾವಣೆಯಲ್ಲಿ ನನಗೆ ಸ್ಪರ್ದೆ ಮಾಡಲು ಟೀಕೇಟ್ ನೀಡಿದರೆ ಮತದಾರರು ನನ್ನ ಕೈ ಹಿಡಿದರೆ ಈ ಭಾಗದ ಜನತೆ ಆರೋಗ್ಯ, ಶಿಕ್ಷಣ, ಕೃಷಿ, ಕಾರ್ಮಿಕರಿಗೆ ಮತ್ತು ರೈತರಿಗೆ ನೆರವಾಗುವಂತ ಕಾರ್ಯಕ್ರಮಗಳನ್ನು ಹಾಕಿ ಕೊಳ್ಳಲಾಗುವುದು ಎಂದು ಚಿತ್ರದುರ್ಗ ಲೋಕಸಭಾ ಕಾಂಗ್ರೆಸ್ ಪಕ್ಷ ಟಿಕೇಟ್ ಆಕಾಂಕ್ಷಿ ಕುಮಾರಸ್ವಾಮಿ ತಿಳಿಸಿದರು.



ಚಿತ್ರದುಗ್ ನಗರದಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ನಾನು ಬಿಎಸ್‌ಸಿ ಅಗ್ರಿಕಲ್ಚರ್ ವಿದ್ಯಾಭ್ಯಾಸವನ್ನು ಮಾಡಿದ್ದು, ರೈತಾಪಿ ಕುಟುಂಬದವನಾಗಿದ್ದೇನೆ ನನ್ನ ತಂದೆಯಾದ ವೆಂಕಟರಮಣಪ್ಪ ದೆಸೆಯಿಂದ ಕಳೆದ 30ವರ್ಷದಿಂದ ರಾಜಕೀಯದಲ್ಲಿದ್ದೇನೆ, ಕಾಂಗ್ರೆಸ್‌ನಲ್ಲಿ ವಿವಿಧ ರೀತಿಯ ಹುದ್ದೆಗಳನ್ನು ಅಲಂಕರಿಸಿ ಕೆಲಸವನ್ನು ಮಾಡಿದ್ದೇನೆ. ನನಗೆ ಬಡವರ, ಕಾರ್ಮಿಕರ ಕಷ್ಟ ಏನೆಂದು ಗೊತ್ತಿದೆ ಅದರ ಬಗ್ಗೆಯೂ ಚಿಂತನೆಯು ಸಹಾ ಇದೆ. ಇಲ್ಲಿ ಲೋಕಸಭಾ ಸದಸ್ಯರಾದವರು ಲೋಕಸಭೆಯಲ್ಲಿ ಕ್ಷೇತ್ರದ ಪ್ರಗತಿಯ ಬಗ್ಗೆ ಯಾವ ಮಾತನ್ನು ಸಹಾ ಆಡುವುದಿಲ್ಲ ಅಲ್ಲದೆ ಕ್ಷೇತ್ರದಲ್ಲಿ ಪ್ರಗತಿಯನ್ನು ಸಹಾ ಮಾಡುವುದಿಲ್ಲ, ಚಿತ್ರದುರ್ಗ ಪ್ರವಾಸೋದ್ಯಮಕ್ಕೆ ಹೇಳಿ ಮಾಡಿಸಿದ ಜಾಗವಾಗಿದ ಅದರ ಬಗ್ಗೆ ಯಾವ ಸಂಸದ ಸದಸ್ಯರು ಸಹಾ ಗಮನ ನೀಡಿಲ್ಲ, ಅಲ್ಲದೆ ಪಾವಗಡದಲ್ಲಿ ಸೋಲಾರ ಪಾರ್ಕನ್ನು ಹಾಕುವುದರ ಮೂಲಕ ವಿದ್ಯುತ್ ಉತ್ಪಾದನೆಯನ್ನು ಮಾಡಲಾಗುತ್ತಿದೆ ಇದರ ಬಗ್ಗೆಯೂ ಸಹಾ ಯಾರು ಗಮನ ನೀಡುತ್ತಿಲ್ಲ ಎಂದು ವಿಷಾಧಿಸಿದರು.

ಕಳೆದ ಎರಡು ಬಾರಿ ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ಟಿಕೇಟ್ ಆಕಾಂಕ್ಷಿಯಾಗಿದ್ದೆ ಆದರೆ ಟಿಕೇಟ್ ಕೈ ತಪ್ಪಿತು ಈ ಬಾರಿ ನನಗೆ ಟೀಕೇಟ್ ಸಿಗುವ ನಿರೀಕ್ಷೆ ಇದೆ. ಅಲ್ಲದೆ ಇಲ್ಲಿ ನನ್ನ ಭೋವಿ ಸಮುದಾಯವರು 2 ಲಕ್ಷ ಜನರಿದ್ದಾರೆ. ಮಠ ಇದೆ ಶ್ರೀಗಳ ಆರ್ಶಿವಾದ ನನ್ನ ಮೇಲೆ ಇದೆ. ಅಲ್ಲದೆ ಮುಖ್ಯಮಂತ್ರಿ ಸಿದ್ದರಾಮಯ್ಯ ರವರು ಸಮಾಜಿಕ ನ್ಯಾಯದ ಮೇಲೆ ಈ ಬಾರಿ ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ಭೋವಿ ಸಮುದಾಯಕ್ಕೆ ಟೀಕೇಟ್ ನೀಡುತ್ತಾರೆ ಎಂಬ ನಂಬಿಕೆ ಇದೆ ಈ ಹಿನ್ನಲೆಯಲ್ಲಿ ಕ್ಷೇತ್ರವನ್ನು ಪ್ರವಾಸ ಮಾಡುವುದರ ಮೂಲಕ ಮತದಾರರನ್ನು ಭೇಟಿ ಅವರ ಕಷ್ಟಗಳನ್ನು ಆಲಿಸಲಾಗುತ್ತಿದೆ. ಈ ಬಾರಿ ನನಗೆ ಟೀಕೇಟ್‌ನ್ನು ನೀಡುವಂತೆ ಪಕ್ಷದ ಹೈಕಮಾಂಡ್‌ಗೆ ಮನವಿಯನ್ನು ಮಾಡಲಾಗಿದೆ. ಅವರು ಸಹಾ ಕ್ಷೇತ್ರದಲ್ಲಿ ಪ್ರವಾಸವನ್ನು ಮಾಡುವಂತೆ ಸೂಚಿಸಿದ್ದಾರೆ ಎಂದರು.

ಈ ಕ್ಷೇತ್ರದ ಟೀಕೇಟ್ ಆಕಾಂಕ್ಷಿಯಾಗಿ ನನಗೆ ಇಲ್ಲಿನ ಸಮಸ್ಯೆಗಳ ಬಗ್ಗೆ ಅರಿವು ಇದೆ ಬರದ ನಾಡದ ಚಿತ್ರದುರ್ಗ ಮುಂದಿನ ದಿನಮಾನದಲ್ಲಿ ಮಲೆನಾಡಾಗಿ ಮಾರ್ಪಾಡಾಗಬೇಕಿದೆ ಇದಕ್ಕಾಗಿ 1 ಕೋಟಿ ಸಸಿಗಳನ್ನು ನೆಡುವ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗುವುದು, ಇದ್ದಲ್ಲದೆ ಪಂಚಾಯಿತಿಗೆ ಒಂದರಂತೆ ಹೈಟೆಕ್ ಶಾಲೆಯನ್ನು ನಿರ್ಮಾಣ ಮಾಡುವುದರ ಮೂಲಕ ಎಲ್ಲಾ ಮಕ್ಕಳು ಶಿಕ್ಷಣ ಪಡೆಯುವಂತಾಗಬೇಕು, ಇದರೊಂದಿಗೆ ತಾಲ್ಲೂಕಿಗೆ ಒಂದರಂತೆ ಹೈಟೆಕ್ ಆಸ್ಪತ್ರೆಯನ್ನು ಸಹಾ ನಿರ್ಮಾಣ ಮಾಡುವ ಯೋಚನೆ ಇದೆ. ಚಿತ್ರದುರ್ಗ ಲೋಕಸಭಾ ಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿಸುವ ಕನಸು ನನ್ನದಾಗಿದೆ ಇದಕ್ಕೆ ಪಕ್ಷದ ಹೈಕಮಾಂಡ್ ಮತ್ತು ಮತದಾರರ ಒಲವು ಅಗತ್ಯವಾಗಿದೆ ಎಂದು ಕುಮಾರಸ್ವಾಮಿ ತಿಳಿಸಿದರು. ಗೋಷ್ಟಿಯಲ್ಲಿ ಧನಂಜಯ, ಮಂಜುನಾಥ್, ಸೋಮಶೇಖರ ರೆಡ್ಡಿ, ಮೇಘರಾಜ್, ಬಾಲಕೃಷ್ಣ, ಬಾಬು ಸೇರಿದಂತೆ ಇತರರು ಭಾಗವಹಿಸಿದ್ದರು.

# ಸೋನಿಯಾ ಗಾಂಧಿ ಆದರ್ಶವನ್ನು ಎಲ್ಲರೂ ಮೈಗೂಡಿಸಿಕೊಳ್ಳಬೇಕು: ಶಿವಮ್ಮ ರಾಜಣ್ಣ

» ಚಳ್ಳಕೆರೆ

ಕಾಂಗ್ರೆಸ್ ಪಕ್ಷದಅಧಿನಾಯಕಿ ಸೋನಿಯಾಗಾಂಧಿ ತನ್ನ ಅತ್ತೆ ದಿ.ಇಂದಿರಾಗಾಂಧಿ, ಪತಿ ದಿ.ರಾಜೀವಗಾಂಧಿಯವರ ಮಾರ್ಗದರ್ಶನದಲ್ಲಿ ರಾಜಕೀಯ ಪ್ರವೇಶ ಪಡೆದು ಎಐಸಿಸಿ ಅಧ್ಯಕ್ಷರಾಗಿ ಕಾಂಗ್ರೆಸ್ ಪಕ್ಷವನ್ನುಸಂಘಟಿಸಿದ್ದಾರೆ.ಅವರ 77ನೇ ಹುಟ್ಟುಹಬ್ಬವನ್ನು ನಾವೆಲ್ಲರೂ ಸಂಭ್ರಮದಿಂದ ಆಚರಿಸುತ್ತಿದ್ದು, ಅವರ ಆದರ್ಶಗಳನ್ನು ಕಾಂಗ್ರೆಸ್ ಪಕ್ಷದ ಪ್ರತಿಯೊಬ್ಬ ಮಹಿಳೆಯೂ ಅಳವಡಿಸಿಕೊಂಡು ಮುನ್ನಡೆಯಬೇಕೆಂದು ನನ್ನಿವಾಳ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶಿವಮ್ಮರಾಜಣ್ಣ ತಿಳಿಸಿದರು.



ಅವರು, ನಗರದ ಶಾಸಕರ ಭವನದಲ್ಲಿ ಚಳ್ಳಕೆರೆ ಬ್ಲಾಕ್ ಕಾಂಗ್ರೆಸ್ ಘಟಕ, ಮಹಿಳಾ ಘಟಕ ಹಾಗೂ ಪಕ್ಷದ ದುರೀಣರು ಹಮ್ಮಿಕೊಂಡಿದ್ದ ಸೋನಿಯಾಗಾಂಧಿಯವರ 77ನೇ ಹುಟ್ಟುಹಬ್ಬವನ್ನು ಕೇಕ್ ಕತ್ತರಿಸುವ ಮೂಲಕ ಆಚರಣೆ ಮಾಡಲಾಯಿತು. ಸೋನಿಯಾಗಾಂಧಿಯವರು ಇನ್ನೂ ನೂರು ವರ್ಷದ ತನಕ ಬಾಳಿ ಕಾಂಗ್ರೆಸ್ ಪಕ್ಷಕ್ಕೆ ಮಾರ್ಗದರ್ಶನ ನೀಡುವ ವಿಶ್ವಾಸವಿದೆ ಎಂದು ತಿಳಿಸಿದರು.

ಅಧ್ಯಕ್ಷ ಕೆ.ವೀರಭದ್ರಯ್ಯ ಮಾತನಾಡಿ, ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ಕಾರ್ಯಕಾರಿ ಸಮಿತಿಯನ್ನು ಉನ್ನತ್ತ ಸ್ಥಾನವನ್ನು ಅಲಂಕರಿಸಿದ ಕೆಲವೇ ಕೆಲವು ಮಹಿಳೆಯರಲ್ಲಿ ಸೋನಿಯಾಗಾಂಧಿ ಪ್ರಮುಖರು. ಪಾರ್ಲಿಮೆಂಟ್ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಹೆಚ್ಚು ಸ್ಥಾನ ಪಡೆದು ದೇಶದ ಪ್ರಧಾನಿಯಾಗುವ ಅವಕಾಶ ಅವರಿದ್ದರಿದ್ದರೂ ಅವರು ಮನಮೋಹನ್‌ಸಿಂಗ್ ಪ್ರಧಾನಿಯನ್ನಾಗಿ ಮಾಡಿದರು. ಅವರಿಗೆ ಅಧಿಕಾರಕ್ಕಿಂತ ಪಕ್ಷದ ಗೌರವ, ಘನತೆಗೆ ಹೆಚ್ಚು ಬೆಲೆ ನೀಡಿದ ಮಹಾನ್ ಮಹಿಳೆ ಎಂದರು. ಕಾರ್ಯಕ್ರಮದಲ್ಲಿ ಬುಡ್ನಹಟ್ಟಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಸುಮಲತಾ, ನಗರಂಗೆರೆ ಗ್ರಾಮ ಪಂಚಾಯಿತಿ ಅಧ್ಯಕ್ಷೆ ನಾಗವೇಣಿ, ಸದಸ್ಯೆ ಯರ್ರಮ್ಮ, ದ್ಯಾಮಲಾಂಭ, ವಿಜಯಮ್ಮ, ಲಕ್ಷ್ಮಿದೇವಿ, ಜಯಲಕ್ಷ್ಮಿ, ಪಾರಿಜಾತ, ತಾಲ್ಲೂಕು ಅಲ್ಪಸಂಖ್ಯಾತ ಘಟಕದ ಅಧ್ಯಕ್ಷ ಅನ್ವರ್‌ಮಾಸ್ಟರ್, ಬ್ಲಾಕ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪಿ.ತಿಪ್ಪೇಸ್ವಾಮಿ, ಬಷೀರ್‌ಸಾಬ್, ಕೆ.ಸೈಪುಲ್ಲಾ, ಭೀಮಣ್ಣ, ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ತಿಪ್ಪೇಸ್ವಾಮಿ, ಮಾಜಿ ಪುರಸಭಾ ಸದಸ್ಯ ದಳವಾಯಿಮೂರ್ತಿ, ಜಗದೀಶ್, ರುದ್ರಮುನಿ ಮುಂತಾದವರು ಉಪಸ್ಥಿತರಿದ್ದರು.

## ಎನ್‌ಎಸ್‌ಎಸ್ ಘಟಕದಿಂದ ರಕ್ತದಾನ ಶಿಬಿರ



» ಚಳ್ಳಕೆರೆ

ನಗರದ ವಾಸವಿ ಪದವಿಪೂರ್ವ ಹಾಗೂ ಪದವಿ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನಾ ಘಟಕದ ವತಿಯಿಂದ ರಕ್ತದಾನ ಶಿಬಿರವನ್ನು ಏರ್ಪಡಿಸಿದ್ದು, ಪ್ರಾಂಶುಪಾಲ ಜೆ.ಶ್ರೀರಾಮುಲು ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದರು. ಪ್ರತಿವರ್ಷವೂ ಕಾಲೇಜಿನಲ್ಲಿ ಹಲವಾರು ಸಾಂಸ್ಕೃತಿಕ ಚಟುವಟಿಕೆಗಳ ಮಧ್ಯೆಯೂ ಸಾರ್ವಜನಿಕರ ಆರೋಗ್ಯಕ್ಕೆ ಉಪಯೋಗವಾಗುವಂತಹ ಕಾರ್ಯಕ್ರಮವನ್ನು ಮಾಡುತ್ತಾ ಬಂದಿದೆ. ಇದೇ ರೀತಿ ಪ್ರಸ್ತುತ ವರ್ಷವೂ ಸಹ ಅನೇಕ ಸಂದರ್ಭದಲ್ಲಿ ಪ್ರಾಣ ರಕ್ಷಣೆಗಾಗಿ ಅಗತ್ಯವಿರುವ ರಕ್ತವನ್ನು ನಮ್ಮ ಕಾಲೇಜಿನ ವಿದ್ಯಾರ್ಥಿಗಳು ಜಿಲ್ಲೆಯ ರಕ್ತನಿಧಿ ಕೇಂದ್ರಕ್ಕೆ ನೀಡುತ್ತಾರೆ. ಈ ಕಾರ್ಯಕ್ರಮದಲ್ಲಿ ಜಿಲ್ಲಾ ರಕ್ತನಿಧಿ ಕೇಂದ್ರದ ಅಧಿಕಾರಿ ಡಾ.ರೂಪ ಆಗಮಿಸಿ ರಕ್ತ ಸಂಗ್ರಹ ಮಾಡುತ್ತಿದ್ದಾರೆ ಎಂದರು. ಕಾರ್ಯಕ್ರಮದಲ್ಲಿ ಐಸಿಟಿಸಿ ಕೇಂದ್ರದ ನಂದಾಜ್ಯೋತಿ, ಎನ್‌ಎಸ್‌ಎಸ್ ಅಧಿಕಾರಿ ಪ್ರಭಾಕರ, ಪದವಿಪೂರ್ವ ಕಾಲೇಜು ಪ್ರಾಂಶುಪಾಲ ಸತ್ಯನಾರಾಯಣರೆಡ್ಡಿ, ಉಪನ್ಯಾಸಕರಾದ ಮಂಜುನಾಥ, ಪ್ರಭುಸ್ವಾಮಿ, ತಿಪ್ಪೇಸ್ವಾಮಿ ಉಪಸ್ಥಿತರಿದ್ದರು.



**ಹಿರಿಯ ನಟಿ ಲೀಲಾವತಿಯವರ ನಿಧನಕ್ಕೆ ಮಾಧ್ಯಮ ಒಕ್ಕೂಟದ ಕಾರ್ಯಾಲಯದಲ್ಲಿ ಸಂತಾಪ ವ್ಯಕ್ತಪಡಿಸಲಾಯಿತು. ಅಧ್ಯಕ್ಷ ಕೆ.ಶಿವಕುಮಾರ್, ಉಪಾಧ್ಯಕ್ಷ ಡಿ.ಈಶ್ವರಪ್ಪ, ಮೌನೇಶಚಾರ್, ಮಂಜುನಾಥ, ಬೆಳಗೆರೆಸುರೇಶ್, ಎಂ.ರಘುನಾಗ, ಎಚ್.ಎನ್. ಆದರ್ಶ, ಓ.ಪಾಪಣ್ಣ, ಹನುಮಂತರಾಯ, ಚಂದ್ರು ಮುಂತಾದವರು ಇದ್ದರು.**

# ಜಾತಿ ಸಂಕೋಲೆ ಅಳಿಸಲು ಕನಕದಾಸರ ಕೀರ್ತನೆ ಸಹಕಾರಿ

» ಚಳ್ಳಕೆರೆ

ಸಮಾಜದಲ್ಲಿ ಆಳಾವಾಗಿ ಬೇರೂರಿದ್ದ ಜಾತೀಯತೆಯ ವಿರುದ್ಧ ಕೀರ್ತನೆಯ ಮೂಲಕ ಜಾಗೃತಿ ಮೂಡಿಸಿದ ಮಹಾನ್ ಸಂತ ಭಕ್ತಕನಕದಾಸರು. ಕನಕದಾಸರ ಅನೇಕ ಕೀರ್ತನೆಗಳು ಸಮಾಜದಲ್ಲಿ ಪರಿವರ್ತನೆಯ ಗಾಳಿಬೀಸಲು ಕಾರಣವಾಯಿತು ಎಂದು ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಟಿ.ತಿಪ್ಪೇಸ್ವಾಮಿ ತಿಳಿಸಿದರು. ಅವರು, ಭಾನುವಾರ ಪಿ.ಮಹದೇವಪುರ ಗ್ರಾಮದಲ್ಲಿ ಕನಕಯುವಕಸಂಘಹಮ್ಮಿಕೊಂಡಿದ್ದ ಕನಕ ಜಯಂತೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಶಾಸಕ ಟಿ.ರಘುಮೂರ್ತಿ ಪರವಾಗಿ ಕಾರ್ಯಕ್ರಮ ಉದ್ಘಾಟಿಸಿದ ತಿಪ್ಪೇಸ್ವಾಮಿಯವರು ಕನಕದಾಸರ ಆದರ್ಶಗಳು ಎಲ್ಲರಿಗೂ ಸ್ಪೂರ್ತಿಯಾಗಿವೆ ಎಂದರು.



ರೇವಣಸಿದ್ದೇಶ್ವರ ವಿದ್ಯಾವರ್ಧಕ ಸಂಘ ಅಧ್ಯಕ್ಷ ಆರ್.ಮಲ್ಲೇಶಪ್ಪ ಪ್ರಾಸ್ತಾವಿಕವಾಗಿ ಮಾತನಾಡಿ, ತಾಲ್ಲೂಕಿನಾದ್ಯಂತ ಕುರುಬ ಸಮಾಜದ ಸಂಘಟನೆಗಾಗಿ ಪ್ರವಾಸ ನಡೆಸಲಾಗುವುದು. ಇತ್ತೀಚಿನ ದಿನಗಳಲ್ಲಿ ಕನಕ ಜಯಂತಿ ಆಚರಣೆ ಹಿನ್ನೆಲೆಯಲ್ಲಿ ನಮ್ಮ ಸಮುದಾಯದ ಬಲಗೊಳ್ಳುತ್ತಿದೆ. ಆದರೆ, ಗ್ರಾಮೀಣ ಪ್ರದೇಶದ ಸಮಾಜದ ಬಂಧುಗಳು ಉತ್ಸಾಹದಿಂದ ಇಂತಹ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕು ಎಂದರು.

ಜಿಲ್ಲಾ ಪಂಚಾಯಿತಿ ಮಾಜಿಅಧ್ಯಕ್ಷೆ ಶಶಿಕಲಾ ಸುರೇಶ್ ಬಾಬು ಮಾತನಾಡಿ, ಸಂಘಟನೆ ಎಂದರೆ ಕೇವಲ ಪುರುಷರಷ್ಟೇ ಸೇರುವುದಲ್ಲ, ನಮ್ಮ ಸಮಾಜದಲ್ಲಿ ಸಾಕಷ್ಟು ಮಹಿಳೆಯರು ಇದ್ದಾರೆ, ವಿದ್ಯಾವಂತರಿದ್ದಾರೆ ಅವರೂ ಸಹ ಸಂಘಟನೆಯ ನೇತೃತ್ವ ವಹಿಸಬೇಕು. ಮಹಿಳೆಯರು ಮುನ್ನುಗ್ಗಿ ಕಾರ್ಯನಿರ್ವಹಿಸಿದರೆ ಮಾತ್ರ ಸಂಘಟನೆಗೆ ಹೆಚ್ಚು ಬಲಬರುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಪ್ರೊ.ಎಂ.ಶಿವಲಿಂಗಪ್ಪ, ಪರಶುರಾಮೇಗೌಡ, ತ್ಯಾಗರಾಜ, ಎಸ್.ಸುಧೀರ್, ಸಿ.ವೀರಾ ನಾಯಕ, ಡಾ.ಶಿವಣ್ಣ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಕವಿತಾ, ಉಪಾಧ್ಯಕ್ಷ ಓಬಳೇಶ್ ಪಾಲ್ಗೊಂಡಿದ್ದರು.

## ಕೈಗಾರಿಕೆ ಸ್ಥಾಪನೆಗೆ ಅರ್ಜಿ ಆಹ್ವಾನ

» ದಾವಣಗೆರೆ

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಜಿಲ್ಲೆಯ ಸಾರಥಿ, ಕುರುಬರಹಳ್ಳಿ 1ನೇ ಹಂತದ ಕೈಗಾರಿಕಾ ಪ್ರದೇಶದಲ್ಲಿ ಉದ್ದಿಮೆದಾರರಿಂದ ಕೈಗಾರಿಕೆ ಸ್ಥಾಪನೆಗೆ ಜಮೀನು ಹಂಚಿಕೆಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವ ಉದ್ದಿಮೆದಾರರು ನಗರದ ಕರೂರು ಕೈಗಾರಿಕಾ ಪ್ರದೇಶದಲ್ಲಿನ ಜಿಲ್ಲಾ ಕೈಗಾರಿಕಾ ಕೇಂದ್ರದಲ್ಲಿ ಅರ್ಜಿ ನಮೂನೆಯನ್ನು ಪಡೆಯಬೇಕು. ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲೆಗಳೊಂದಿಗೆ ಅದೇ ಕಚೇರಿಗೆ ಸಲ್ಲಿಸಬೇಕು ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

# ದೇಶದ ಭವಿಷ್ಯದಲ್ಲಿ ಮಕ್ಕಳ ಪಾತ್ರ ಬಹು ಪ್ರಮುಖ

» ದಾವಣಗೆರೆ

ಮಕ್ಕಳುವಿದ್ಯಾವಂತರಾಗಿಶಿಕ್ಷಣದಮೂಲಕ ದೇಶದಭವಿಷ್ಯವನ್ನುರೂಪಿಸಬೇಕು ಎಂದು ಜಿಲ್ಲಾ ಪಂಚಾಯತ್ ಯೋಜನಾಧಿಕಾರಿ ಮಲ್ಲನಾಯ್ಕ್ ತಿಳಿಸಿದರು.

ಶುಕ್ರವಾರ ರಾಜ್ಯ ಬಾಲಭವನ ಸೊಸೈಟಿ ಬೆಂಗಳೂರು, ಜಿಲ್ಲಾ ಬಾಲಭವನ ಸಮಿತಿ (ರಿ) ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದೊಂದಿಗೆ ಜೆ.ಹೆಚ್ ಪಟೇಲ್ ಬಡಾವಣೆಯ ಬಾಲಭವನದಲ್ಲಿ ನಡೆದ ಮಕ್ಕಳ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ಮಕ್ಕಳ ದಿನಾಚರಣೆಯು ಪ್ರತಿ ಮಗುವಿನ ವಿಶಿಷ್ಟ ಅಗತ್ಯತೆಗಳು ಮತ್ತು ಪ್ರತಿಭೆಗಳನ್ನು ಗುರುತಿಸುವ ಒಂದು ವಿಶೇಷ ಕಾರ್ಯಕ್ರಮವಾಗಿದ್ದು, ದೇಶದ ಭವಿಷ್ಯವನ್ನು ರೂಪಿಸಲು ಮಕ್ಕಳು ಉನ್ನತ ವ್ಯಾಸಂಗಪಡೆದುಉತ್ತಮಪ್ರಜೆಗಳಾಗಬೇಕು ಎಂದರು.ನಗರದಲ್ಲಿ ಬಾಲಭವನ ನಿರ್ಮಾಣವಾಗಿ ಐದು ವರ್ಷ ಕಳೆದರೂ ಯಾವುದೇ ಕಾರ್ಯಕ್ರಮ ನಡೆದಿಲ್ಲ, ಈ ದಿನ ವಿಶೇಷವಾಗಿ ಮುದ್ದು ಮಕ್ಕಳ ದಿನಾಚರಣೆಯನ್ನು ಆಚರಿಸುತ್ತಿರುವುದು ಎಲ್ಲಾರ ಮೊಗದಲ್ಲಿ ಸಂತಸ ತಂದಿದೆ. ಮಕ್ಕಳಲ್ಲಿರುವ ಸೃಜನಶೀಲತೆಯನ್ನು ತೋರ್ಪಡಿಸುವತಂಹ ವಿಶೇಷ ಕಾರ್ಯಕ್ರಮ ಇದಾಗಿದೆ ಎಂದರು.

ನೃತ್ಯ ಪ್ರದರ್ಶನ: ವಿವಿಧ ಶಾಲಾ ವಿದ್ಯಾರ್ಥಿಗಳಿಂದ ನೃತ್ಯ, ಗಾಯನ ಹಾಗೂ ಮುಂತಾದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಜಿಲ್ಲಾ ಬಾಲಭವನದಲ್ಲಿ ಮಕ್ಕಳ ದಿನಾಚರಣೆ ಅಂಗವಾಗಿ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಲಾಗಿದ್ದು ವಿಜೇತರಿಗೆ ಪ್ರಮಾಣ ಪತ್ರ ಹಾಗೂ ಬಹುಮಾನ ವಿತರಿಸಲಾಯಿತು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕ ಕೊಟ್ರೇಶ್ ಜಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ವಾಸಂತಿ ಉಪ್ಪಾರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿಚಂದ್ರ, ಜಿಲ್ಲಾ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಅಭಿಕುಮಾರ್ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ನಾಮ ನಿರ್ದೇಶಿತ ಸದಸ್ಯರ ನೇಮಕಕ್ಕೆ ಅರ್ಜಿ ಆಹ್ವಾನ

» **ಹಾವೇರಿ**

ಕರ್ನಾಟಕ ವಿಶ್ವಕರ್ಮ ಸಮುದಾಯ ಅಭಿವೃದ್ಧಿ ನಿಗಮದಿಂದ ವಿವಿಧ ಸಾಲ ಸೌಲಭ್ಯಗಳ ಆಯ್ಕೆಗೆ ಅರ್ಹ ಫಲಾನುಭವಿಗಳನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಯುವ ಆಯ್ಕೆ ಸಮಿತಿ ಸಭೆಯಲ್ಲಿ ಆಯ್ಕೆ ಮಾಡಲಾಗುತ್ತಿದೆ. ಈ ಆಯ್ಕೆ ಸಮಿತಿ ಸಭೆಗೆ ವಿಶ್ವಕರ್ಮ ಸಮುದಾಯಕ್ಕೆ ಸೇರಿದ ಒಬ್ಬರನ್ನುಎರಡುವರ್ಷಗಳಅವಧಿಗೆಅಧಿಕಾರೇತರ ನಾಮ ನಿರ್ದೇಶಿತ ಸದಸ್ಯರ ನೇಮಕಾತಿಗೆ ಅರ್ಜಿ ಆಹ್ವಾನಿಸಲಾಗಿದೆ.ಅಭ್ಯರ್ಥಿಯು ವಿಶ್ವಕರ್ಮ ಸಮುದಾಯಕ್ಕೆ ಸೇರಿದವರಾಗಿರಬೇಕು. ಕನಿಷ್ಠ 35 ವರ್ಷದಿಂದ ಗರಿಷ್ಠ 65 ವರ್ಷ ವಯೋಮಿತಿ ಒಳಗಿರಬೇಕು. ಹಾವೇರಿ ಜಿಲ್ಲೆಯಲ್ಲಿ ಕನಿಷ್ಠ 15 ವರ್ಷಗಳಿಂದ ವಾಸವಾಗಿರಬೇಕು.ಕನಿಷ್ಠ ಎಸ್.ಎಸ್.ಎಲ್.ಸಿ ವಿದ್ಯಾಭ್ಯಾಸ ಮಾಡಿರಬೇಕು. ಜಿಲ್ಲೆಯ ಸಮಗ್ರ ಮಾಹಿತಿ ಹಾಗೂ ವಿಶ್ವಕರ್ಮ ಜನಾಂಗದವರು ವಾಸಿಸುವ ಸ್ಥಳ, ಕೈಗೊಳ್ಳುತ್ತಿರುವ ಉದ್ಯೋಗ ಇತ್ಯಾದಿ ಅಂಕಿ ಅಂಶಗಳ ಮಾಹಿತಿ ತಿಳಿದಿರಬೇಕು.ವಿಶ್ವಕರ್ಮಪಂಚವೃತ್ತಿಯೋಜನೆಗಳ ಪರಂಪರಾಗತವಾಗಿ ನಿರ್ವಹಿಸಿರುವ ಅನುಭವ ಹೊಂದಿರಬೇಕು. ಯಾವುದೇ ರೀತಿಯ ಕ್ರಿಮಿನಲ್ ಮೊಕ್ಕದ್ದಮೆಗಳನ್ನು ಎದುರಿಸುತ್ತಿರಬಾರದು ಹಾಗೂ ದಂಡ/ಜುಲ್ಮಾನೆ/ಶಿಕ್ಷೆ ಅನುಭವಿಸಿರಬಾರದು. ಪೊಲೀಸ್ ಇಲಾಖೆಯಿಂದ ಧೃಢೀಕರಣ ಪತ್ರವನ್ನು ಪಡೆದು ಸಲ್ಲಿಸಬೇಕು. ವಿಶ್ವಕರ್ಮ ಸಮುದಾಯದ ಜನಾಂಗದವರ ಪ್ರತಿನಿಧಿತ್ವ ವಹಿಸಿ ಸಮಾಜಮುಖಿ ಕೆಲಸ ಕಾರ್ಯನಿರ್ವಹಿಸುತ್ತಿರುವ ಅರ್ಹ ಅಭ್ಯರ್ಥಿಗಳು ಅಗತ್ಯ ದಾಖಲೆಗಳೊಂದಿಗೆ ದಿನಾಂಕ 15 ರೊಳಗಾಗಿ ಹಾವೇರಿ ಜಿಲ್ಲಾಡಳಿತ ಕಚೇರಿ ಬಿ ಬ್ಲಾಕ್ ಎರಡನೇ ಮಹಡಿ ಕೊಠಡಿ ಸಂಖ್ಯೆ 33ರಲ್ಲಿರುವ ನಿಗಮದ ಕಚೇರಿಗೆ ಅರ್ಜಿ ಸಲ್ಲಿಸಬೇಕು ಎಂದು ಕರ್ನಾಟಕ ವಿಶ್ವಕರ್ಮ ಸಮುದಾಯ ಅಭಿವೃದ್ಧಿ ನಿಗಮದ ಹಾವೇರಿ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 11 ರಿಂದ ಆಯ್ದ ಗ್ರಾಮಗಳಲ್ಲಿ ವಿಕಲಚೇತನರ ಉಚಿತ ತಪಾಸಣಾ ಶಿಬಿರ

» **ಹಾವೇರಿ**

ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರ ಸಂಚಾರಿ ಪುನರ್ವಸತಿ ತಜ್ಞರ ತಂಡದಿಂದ ಡಿಸೆಂಬರ್ 11 ರಿಂದ 26ರವರೆಗೆ ಜಿಲ್ಲೆಯ ಆಯ್ದ ಗ್ರಾಮಗಳಲ್ಲಿ ವಿಕಲಚೇತನರಿಗೆ ಉಚಿತ ತಪಾಸಣೆ ಮತ್ತು ಅರಿವು ಮೂಡಿಸುವ ಶಿಬಿರ ಆಯೋಜಿಸಲಾಗಿದೆ.ಡಿ.11 ರಂದು ಹಿರೇಕೆರೂರು ತಾಲೂಕು ಹೊಲಬಿಕೊಂಡ, ಡಿ.12 ರಂದು ರಾಣೇಬೆನ್ನೂರು ತಾಲೂಕು ಕಜ್ಜರಿ, ಡಿ.13 ರಂದು ಹಾನಗಲ್ ತಾಲೂಕು ಮಾರನಬೀಡ, ಡಿ.18 ರಂದು ಹಾವೇರಿ ತಾಲೂಕು ಬೂದಗಟ್ಟಿ, ಡಿ.19 ರಂದು ಸವಣೂರ ತಾಲೂಕು ಕಲಿವಾಳ, ಡಿ.20 ರಂದು ಶಿಗ್ಗಾಂವ ತಾಲೂಕು ಗುಡ್ಡದ ಚನ್ನಾಪೂರ, ಡಿ.22 ರಂದು ಬ್ಯಾಡಗಿ ತಾಲೂಕು ಕಳಗೊಂಡ ಹಾಗೂ ಡಿ.26 ರಂದು ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರದಲ್ಲಿ ಬೆಳಿಗ್ಗೆ 10-30 ರಿಂದ ತಪಾಸಣಾ ಶಿಬಿರಗಳು ಜರುಗಲಿವೆ ಎಂದು ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಹಾಗೂ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರದ ಗೌರವ ಕಾರ್ಯದರ್ಶಿ ಡಾ.ನೀಲೇಶ ಎಂ.ಎನ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿಕಲಚೇತನರಿಗೆ ಸಾಧನ ಸಲಕರಣೆ ನೀಡಲು ಅರ್ಜಿ

» **ತುಮಕೂರು**

ವಿಕಲಚೇತನರಿಗಾಗಿ ಶೇ.5% ಅನುದಾನದಲ್ಲಿ ಸಾಧನ ಸಲಕರಣೆಗಳನ್ನು ವಿತರಿಸಲು ಅರ್ಹ ವಿಕಲಚೇತನರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ವಿಕಲಚೇತನರು ಡಿಸೆಂಬರ್ 20ರೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಅರ್ಜಿಯನ್ನು ಜಿಲ್ಲೆಯ ಆಯಾ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಕಚೇರಿಗೆಸಲ್ಲಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

» **ತುಮಕೂರು**

ಪಾವಗಡ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ವತಿಯಿಂದ 2023-24ನೇ ಸಾಲಿಗೆ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳಡಿ ಸಾಲ ಸೌಲಭ್ಯ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಉದ್ಯೋಗಿನಿ ಯೋಜನೆ, ಚೇತನ ಯೋಜನೆ, ಧನಶ್ರೀ ಯೋಜನೆ, ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ, ಮಾಜಿ ದೇವದಾಸಿ ಮಹಿಳೆಯರ ಪುನರ್ವಸತಿ ಯೋಜನೆಯಡಿ ಸೌಲಭ್ಯ ಪಡೆಯಲಿಚ್ಛಿಸುವವರು ಡಿಸೆಂಬರ್ 22 ರೊಳಗಾಗಿ ಗ್ರಾಮಒನ್, ಕರ್ನಾಟಕ ಒನ್, ಬೆಂಗಳೂರು ಒನ್ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಪಾವಗಡ ಶಿಶು ಅಭಿವೃದ್ಧಿ ಯೋಜನಾಧಿಕಾರಿ ತಿಳಿಸಿದ್ದಾರೆ.

### ಮಾಜಿ ಮುಖ್ಯಮಂತ್ರಿ ಕರುಳ ಕುಡಿಗಳಿಂದ

# ಎಸ್.ನಿಜಲಿಂಗಪ್ಪ ಪುತ್ಥಳಿ ಅನಾವರಣ





» **ಹೊಸದುರ್ಗ**

ಪಟ್ಟಣದಎಸ್.ನಿಜಲಿಂಗಪ್ಪಎಜುಕೇಷನಲ್ ಅಂಡ್ ರೂರಲ್ ಡೆವಲಪ್‌ಮೆಂಟ್ ಟ್ರಸ್ಟ್ ವತಿಯಿಂದ ನಡೆಯುತ್ತಿರುವ ಎಸ್.ನಿಜಲಿಂಗಪ್ಪನವರ ಜನ್ಮದಿನಾಚರಣೆ ಹಾಗೂ ನಿಜಲಿಂಗಪ್ಪ ಸಮೂಹ ಶಿಕ್ಷಣ ಸಂಸ್ಥೆಗಳ ವಾರ್ಷಿಕ ಹಬ್ಬ ಕಾರ್ಯಕ್ರಮದ ಎರಡನೇ ದಿನವಾದ ಭಾನುವಾರ ಸಂಜೆ ಎಸ್.ನಿಜಲಿಂಗಪ್ಪನವರ ಕುಡಿಗಳಾದ ಕಿರಣ್‌ಶಂಕರ ಹಾಗೂ ಶ್ರೀಮತಿ ಪ್ರತಿಭಾ ದೇವಿ ಇವರುಗಳು ಎಸ್.ನಿಜಲಿಂಗಪ್ಪನವರ ಪುತ್ಥಳಿಯನ್ನ ಅನಾವರಣ ಮಾಡಿದರು.

ನಂತರ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ಕಿರಣ್‌ಶಂಕರ ಹಾಗೂ ಶ್ರೀಮತಿ ಪ್ರತಿಭಾ ದೇವಿ ಇವರುಗಳನ್ನ ಶಿಕ್ಷಣ ಸಂಸ್ಥೆಯ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂಧರ್ಬದಲ್ಲಿ ಈ ಸಂಧರ್ಬದಲ್ಲಿ ಸಂಸ್ಥೆಯ ಅಧ್ಯಕ್ಷ ಎಂ.ಶಿವಲಿಂಗಪ್ಪ. ಕಾರ್ಯದರ್ಶಿ ಕೆ.ಎಸ್.ಕಲ್ಮಠ್ ಪಿ.ಯು. ಕಾಲೇಜಿನ ಅಕಾಡಮಿ ಡೈರೆಕ್ಟರ್ ಎಂ.ಬಿ ತಿಪ್ಪೇಸ್ವಾಮಿ,ವೀರಶೈವ ಮುಖಂಡ ಷಣ್ಮುಖಪ್ಪ,ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕೆ.ಎಂ.ವೀರೇಶ್, ಆರ್ಥಿಕ ತಜ್ಞ ಜಿ.ಎನ್. ಮಲ್ಲಿಕಾರ್ಜುನಪ್ಪ,ರೈತ ಮುಖಂಡ ಕೆ.ಬಿ.ಸಿದ್ದವೀರಪ್ಪ,ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಪಿ.ಟಿ.ಎಸ್ ತಿಪ್ಪೇಸ್ವಾಮಿ,ಜಿಲ್ಲಾ ಶ್ರೀ ದೇವರಾಜು ಅರಸು ಪ್ರಶಸ್ತಿ ಪುರಸ್ಕೃತ ಡಿ.ಎಂ. ಈಶ್ವರಪ್ಪ, ಸಂಸ್ಥೆಯ ಧರ್ಮದರ್ಶಿಗಳಾದ ಎಂ.ಹೆಚ್.ನೀಲಕಂಠಯ್ಯ,ಎಂ.ಚಂದ್ರಯ್ಯ, ಎ.ಎಸ್.ಸಿದ್ದರಾಮೇಶ್, ಬಿ.ಬಸವರಾಜ್, ಜಿ.ಪ್ರಕಾಶ್‌ಮೂರ್ತಿ ಸೇರಿದಂತೆ ಸಂಸ್ಥೆಯ ಆಡಳಿತ ಮಂಡಳಿ, ಸಿಬ್ಬಂಧಿ ವರ್ಗ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದ ನಂತರ ಶಾಲಾ ಹಾಗೂ ಕಾಲೇಜು ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

## ಬದುಕು ಧಾರ್ಮಿಕ ವಿಧಿ ವಿಧಾನಗಳ ಜೋತೆ ಹೋಗಿದ್ದೆ ಆದರೆ ನಮ್ಮ ಬದುಕು ಸಾರ್ಥಕ

» **ಹೊಸದುರ್ಗ**

ಜೀವನದಲ್ಲಿ ಅಮೂಲ್ಯವಾದದ್ದು ಧರ್ಮ, ಸಂಸ್ಕಾರ. ಸಂಸ್ಕೃತಿ, ಧರ್ಮ ಮತ್ತು ಸಂಸ್ಕಾರ ಇವುಗಳ ಕೇಂದ್ರ ಬಿಂದು ಎಂದರೆ ಅದು ಶೈಕ್ಷಣಿಕ ಸಂಸ್ಥೆಗಳು ಮಠಮಾನ್ಯಗಳು, ದೇವಾಲಯಗಳು, ಅವುಗಳು ಧರ್ಮಕ್ಕಾಗಿ ತಮ್ಮನ್ನ ತಾವು ಸದಾ ತೋಡಗಿಸಿಕೊಂಡಿರುತ್ತವೆ,ನಮ್ಮ ಬದುಕು ಧಾರ್ಮಿಕ ವಿಧಿ ವಿಧಾನಗಳ ಜೋತೆ ಹೋಗಿದ್ದೆ ಆದರೆ ನಮ್ಮ ಬದುಕು ಸಾರ್ಥಕವಾಗುತ್ತದೆ ಎಂದು ಹುಣಸಘಟ್ಟ ಶ್ರೀ ತಪೋಕ್ಷೇತ್ರ ಹಾಲುಸ್ವಾಮಿ ಮಠದ ಶ್ರೀ ಗುರುಮೂರ್ತಿ ಶಿವಾಚಾರ್ಯ ಸ್ವಾಮೀಜಿ ತಿಳಿಸಿದರು.

ಪಟ್ಟಣದ ಎಸ್.ನಿಜಲಿಂಗಪ್ಪ ಎಜುಕೇಷನಲ್ ಅಂಡ್ ರೂರಲ್ ಡೆವಲಪ್‌ಮೆಂಟ್ ಟ್ರಸ್ಟ್ ವತಿಯಿಂದ ನಡೆಯುತ್ತಿರುವ ಎಸ್.ನಿಜಲಿಂಗಪ್ಪನವರ ಜನ್ಮದಿನಾಚರಣೆ ಹಾಗೂ ನಿಜಲಿಂಗಪ್ಪ ಸಮೂಹ ಶಿಕ್ಷಣ ಸಂಸ್ಥೆಗಳ ವಾರ್ಷಿಕ ಹಬ್ಬ ಕಾರ್ಯಕ್ರಮದಲ್ಲಿ ಇಷ್ಟಲಿಂಗ ಪೂಜೆ ಹಾಗು ಹೋಮ ಮತ್ತು ಎಸ್.ನಿಜಲಿಂಗಪ್ಪ ಪದವಿಪೂರ್ವ ಕಾಲೇಜು ಕಟ್ಟಡದ ಶಿಲಾನ್ಯಾಸ ನೆರವೇರಿಸಿ ಮಾತನಾಡಿದರು.

ಬದಲಾಗಿ ನಾವು ಕೇವಲ ಆರ್ಥಿಕತೆಯ ಹಿಂದೆ ಹೋದರೆ ನಾವು ನಮ್ಮ ಬದುಕಿನಲ್ಲಿ ನೆಮ್ಮದಿಯನ್ನ ಕಳೆದುಕೊಳ್ಳುತ್ತೇವೆ. ಹಣ ಗಳಿಸಬುಹುದು ಆದರೆ ಗುಣಗಳಿಸುವುದು ತುಂಭಾ ಕಷ್ಟವಾಗುತ್ತದೆ. ಈ ದೃಷ್ಟಿಯಿಂದ ಮನುಷ್ಯ ಅಂದು ಕೊಂಡಂತೆ ನಡೆಯುವುದಕ್ಕಿಂತ ಹೊಂದಿ ಕೊಂಡು ನಡೆಯವುದು ಬಹಳಷ್ಟು ಶ್ರೇಯಸ್ಸನ್ನ ಕೊಡುತ್ತದೆ.

ಸಮಾಧಾನ ಚಿತ್ತರಾಗಿ ಸಾಗಿಸುವ ಬದುಕು ನೆಮ್ಮದಿಯನ್ನ ತಂದು ಕೊಡುತ್ತೆದೆ, ನೆಮ್ಮದಿ ಸುಖ ಜೀವನವನ್ನ ನೀಡುತ್ತದೆ. ಈ ನಿಟ್ಟಿನಲ್ಲಿ ಎಲ್ಲರ ಬದುಕು ಹಸನವಾಗಲಿ ಎಂದು ಶುಭ ಹಾರೈಸಿದರು.

ವಿದ್ಯಾರ್ಥಿಗಳು ಹಾಗೂ ಯುವಕರು ಮೋಬೈಲ್‌ಗಳಿಗೆ ದಾಸರಾದರೆ ಮುಂದೊಂದು ದಿನ ಇದೇ ಮೋಬೈಲ್ ಸಮಾಜದಲ್ಲಿ ತಲೆ ತಗ್ಗಿಸುವಂತೆ ಮಾಡುತ್ತದೆ ಬದಲಾಗಿ ಕೈಲಿ ಪುಸ್ತಕ ಹಿಡಿದು ಓದಿದರೆ ಅದೇ ಸಮಾಜದ ನಮ್ಮನ್ನ ತಲೆ ಎತ್ತಿ ನೋಡುವಂತೆ ಮಾಡುತ್ತದೆ ಇಂತಹ ಸೂಕ್ಷ್ಮತೆಯನ್ನ ಪ್ರತಿಯೊಬ್ಬರೂ ಸಹಾ ತಿಳಿದುಕೊಳ್ಳಬೇಕಿದೆ ಯಾವುದನ್ನ ನಮಗೆ ಎಷ್ಟು ಅವಶ್ಯಕತೆ ಇದೆಯೋ ಅಷ್ಟನ್ನೇ ಮಾತ್ರ ಉಪಯೋಗಿಸಿಕೊಳ್ಳಬೇಕು ಎಂದು ಮಾರ್ಮಿಕವಾಗಿ ನುಡಿದರು.ಯುವ ಪೀಳಿಗೆ ಮುಂದೆ ಸುಖವಾಗಿರಬೇಕಾದರೆ ಗ್ರಂಥಾವಲೋಕನದ ಕಡೆ ಗಮನ ಕೊಡಿ ಎಂದರುನೋಣವಿಕೆರೆ ಶ್ರೀ ಸೋಮೇಕಟ್ಟೆ ಕಾಡ ಸಿದ್ದೇಶ್ವರ ಮಠದ ಶ್ರೀ ಡಾ:ಕರಿವೃಷಭ ದೇಶೀಕೇಂದ್ರ ಶಿವಯೋಗೀಶ್ವರ ಸ್ವಾಮೀಜಿ ಸಾನಿದ್ಯ ವಹಿಸಿ ಆಶೀರ್ವಚನ ನೀಡಿದರು.

ಈ ಸಂಧರ್ಬದಲ್ಲಿ ಸಂಸ್ಥೆಯ ಅಧ್ಯಕ್ಷ ಎಂ.ಶಿವಲಿಂಗಪ್ಪ. ಕಾರ್ಯದರ್ಶಿ ಕೆ.ಎಸ್. ಕಲ್ಮಠ್ ಪಿ.ಯು.ಕಾಲೇಜಿನ ಅಕಾಡಮಿ ಡೈರೆಕ್ಟರ್ ಎಂ.ಬಿ ತಿಪ್ಪೇಸ್ವಾಮಿ ಸ್ಥೆರಿದಂತೆ ಸಂಸ್ಥೆಯ ಆಡಳಿತ ಮಂಡಳಿ, ಸಿಬ್ಬಂಧಿ ವರ್ಗ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.



> ಶ್ರೀಗಳು ನಿಜಲಿಂಗಪ್ಪ ಸಮೂಹ ಸಂಸ್ಥೆ ಸಾಮಾಜಿಕವಾಗಿ ಸಾಂಸ್ಕೃತಿಕವಾಗಿ ಸಮಾಜದ ಮದ್ಯದಲ್ಲಿ ಎಲ್ಲರನ್ನ ಸಮತೋಲನವಾಗಿ ಕರೆದುಕೊಂಡು ಹೋಗುತ್ತಿದೆ ಎಂಬ ಮೆಚ್ಚುಗೆಯ ಮಾತುಗಳನ್ನಾಡಿದ ಅವರು ಹನಿ ಹನಿಯಾಗಿದ್ದ ಈ ಸಂಸ್ಥೆ ಇಂದು ಆಡಳಿತ ಮಂಡಳಿಯವ ಶ್ರಮದಿಂದ ಉತ್ತಮ ಬೋಧಕರ ಪರಿಶ್ರಮದಿಂದ ಪೋಷಕರ ಪ್ರೋತ್ಸಹದಿಂದ ಮಕ್ಕಳ ಕಲಿಕೆಯ ಆಸಕ್ತಿಯಿಂದ ಬೃಹದಾಕಾರವಾಗಿ ಬೆಳೆಯುತ್ತಿದೆ.
>
> » **ಶ್ರೀ ಗುರುಮೂರ್ತಿ ಶಿವಾಚಾರ್ಯ ಸ್ವಾಮೀಜಿ ಹುಣಸಘಟ್ಟ ಶ್ರೀ ತಪೋಕ್ಷೇತ್ರ ಹಾಲುಸ್ವಾಮಿ ಮಠ**

## ಸ್ವ-ನಿಧಿ ಸೇ ಸಮೃದ್ಧ ಯೋಜನೆ ಹೊಸದುರ್ಗದಲ್ಲಿ ಬೀದಿ ನಾಟಕಗಳ ಮೂಲಕ ಜಾಗೃತಿ



» **ಹೊಸದುರ್ಗ**

ಜಿಲ್ಲಾಡಳಿತ ಚಿತ್ರದುರ್ಗ,ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ, ಪುರಸಭೆ ಹೊಸದುರ್ಗ ಇವರ ಸಹಯೋಗದಲ್ಲಿ ಪ್ರಧಾನ ಮಂತ್ರಿ ಬೀದಿ ಬದಿ ವ್ಯಾಪಾರಿಗಳ ಆತ್ಮ ನಿರ್ಭರ್ ನಿಧಿ(ಪಿ.ಎಂ.ಸ್ವ-ನಿಧಿ) ಮತ್ತು ಸ್ವ-ನಿಧಿ ಸೇ ಸಮೃದ್ಧ ಯೋಜನೆಯ ಬಗ್ಗೆ ಅರಿವು ಮೂಡಿಸುವ ಸಲುವಾಗಿ ಪಟ್ಟಣದ ನಾನಾ ಕಡೆಗಳಲ್ಲಿ ಗುರುವಾರ ಬೀದಿ ನಾಟಕಗಳ ಮೂಲಕ ಜಾಗೃತಿಗೊಳಿಸಲಾಯಿತು.

ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ. ಚಾಲನೆ ನೀಡಿ ಮಾತನಾಡಿದ ಅವರು ಕೇಂದ್ರ ಸರ್ಕಾರದ ಕಲ್ಯಾಣ ಯೋಜನೆಗಳಾದ ಪಿ.ಎಂ. ಸುರಕ್ಷಾ ಭೀಮಾ ಯೋಜನೆ,ಪಿ.ಎಂ. ಜೀವನ್‌ಜ್ಯೋತಿ ಭೀಮಾ ಯೋಜನೆ,ಒನ್ ನೇಷನ್ ಒನ್ ರೇಷನ್ ಕಾರ್ಡ್,ಪಿ.ಎಂ.ಜನ್‌ಧನ್ ಯೋಜನೆ, ಪಿ.ಎಂ.ಶ್ರಮಯೋಗಿ ಮಾನ್‌ಧನ್ ಯೋಜನೆ,ಕಟ್ಟಡ ಹಾಗೂ ಇತರೆ ನಿರ್ಮಾಣಗಳ ಕಾರ್ಮಿಕರ ನೊಂದಾಣಿ ಜನನಿ ಸುರಕ್ಷ ಯೋಜನೆ ಹಾಗೂ ಪಿ.ಎಂ.ಮಾತೃ ವಂದನಾ ಯೋಜನೆ ಇಂತಹ ಯೋಜನೆಗಳ ಸದಪಯೋಗವನ್ನ ಪಡೆದುಕೊಳ್ಳುವಂತೆ ತಿಳಿಸಿದ ಅವರು ಇವುಗಳ ಪ್ರಯೋಜನ ಪಡೆಯುವ ನಿಟ್ಟಿನಲ್ಲಿ ಬೀದಿ ಬೀದಿಗಲ್ಲಿ ನಾಟಕಗಳ ಮೂಲಕ ಅರಿವು ಮೂಡಿಸಲಾಗುತ್ತಿದೆ ಎಂದರು.

ಹಿರಿಯ ಪುರ ಸಭಾ ಸದಸ್ಯ ದಾಳಿಂಬೆಗಿರೀಶ್ ಮಾತನಾಡಿ ಬೀದಿ ಬದಿ ವ್ಯಾಪಾರಿಗಳು ಸರ್ಕಾರದ ಸೌಲಭ್ಯಗಳನ್ನು ಪಡೆದು ಆರ್ಥಿಕತೆಯಲ್ಲಿ ಸದೃಡರಾಗಿ ನಿಮ್ಮ ಜೀವನವನ್ನ ರೂಪಿಸಿಕೊಳ್ಳಿ ತೆಗೆದುಕೊಂಡ ಸಾಲವನ್ನ ಸಮಯಕ್ಕೆ ಸರಿಯಾಗಿ ಮರು ಪಾವತಿ ಮಾಡಿ ನಂಬಿಕೆ ಹಾಗೂ ವಿಶ್ವಾಸ ಉಳಿಸಿಕೊಂಡು ಇನ್ನು ಹೆಚ್ಚಿನ ಸಾಲ ಸೌಲಭ್ಯ ಪಡೆದು ವ್ಯಾಪಾರದಲ್ಲಿ ಉನ್ನತ ಪ್ರಗತಿ ಸಾಧಿಸಿ ಎಂಬ ಆಶಯವನ್ನ ವ್ಯಕ್ತಪಡಿಸಿದರು. ಈ ಸಂಧರ್ಬದಲ್ಲಿ ಪುರಸಭಾ ಸಿಬ್ಬಂಧಿಗಳಾದ ಹನುಮಂತಪ್ಪ, ಸಾವಿತ್ರಮ್ಮ, ನೇಮಿಕಾ, ಅಶ್ವಿನಿ,ರಾಧ.ಹೆಚ್,ಮತ್ತಿತರರು ಉಪಸ್ಥಿತರಿದ್ದರು.

### 13 ರಂದು ವಿದ್ಯುತ್ ಇರಲ್ಲ

**ತುಮಕೂರು:** ಬೆವಿಕಂ ನಗರ ಉಪವಿಭಾಗ-1ರ ವ್ಯಾಪ್ತಿಯಲ್ಲಿ ದುರಸ್ತಿ ಕಾಮಗಾರಿ ಕೈಗೊಂಡಿರುವುದರಿಂದ ಡಿಸೆಂಬರ್ 13 ರಂದು ಬೆಳಿಗ್ಗೆ 11 ರಿಂದ ಸಂಜೆ 5 ಗಂಟೆಯವರೆಗೆ ಗೋವಿಂದನಗರ, ರಿಂಗ್‌ರಸ್ತೆ, ಗುಬ್ಬಿ ಗೇಟ್, ದಾನಾಪ್ಯಾಲೇಸ್ ಹಿಂಭಾಗ ಸುತ್ತಮುತ್ತಲ ಪ್ರದೇಶಗಳಲ್ಲಿ ಮಧ್ಯಂತರ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕೆಂದು ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

# ಹೊಸದುರ್ಗದಲ್ಲಿ ಇಂಜಿನಿಯರಿಂಗ್, ಮೆಡಿಕಲ್ ಕಾಲೇಜು ಸ್ಥಾಪನೆಗೆ ಚಿಂತನೆ ಯೋಜನೆ ಫಲಿಸಲಿ

» **ಹೊಸದುರ್ಗ**

ಮುಂದೆ ಗುರಿ ಹಿಂದೆ ಗುರು ಇದ್ದರೆ ಎಲ್ಲಾ ಕೆಲಸ ಕಾರ್ಯಗಳು ಸಿದ್ದಿಯಾಗುತ್ತವೆ,ಮಾಡುವ ಕೆಲಸದಲ್ಲಿ ಪ್ರಾಮಾಣಿಕತೆ,ನಿಷ್ಠೆಹಾಗೂ ಶ್ರದ್ದೆ ಇರಬೇಕು ಈ ಸಂಸ್ಥೆ ಮುಂದೆ ಹೊಸದುರ್ಗದಲ್ಲಿ ಇಂಜಿನಿಯರಿಂಗ್ ಮೆಡಿಕಲ್ ಕಾಲೇಜು ಸ್ಥಾಪಿಸುವ ಯೋಜನಯನ್ನ ಸಂಸ್ಥೆಯ ಆಡಳಿತ ಮಂಡಳಿ ಚಿಂತನೆ ನಡೆಸುತ್ತಿದೆ ಅವರ ಆಶಯ ಈಡೇರಲಿ ಎಂದು ನೋಣವಿನಕೆರೆ ಶ್ರೀ ಸೋಮೇಕಟ್ಟೆ ಕಾಡ ಸಿದ್ದೇಶ್ವರ ಮಠದ ಶ್ರೀ ಡಾ:ಕರಿವೃಷಭ ದೇಶೀಕೇಂದ್ರ ಶಿವಯೋಗೀಶ್ವರ ಸ್ವಾಮೀಜಿ ಆಶಯ ವ್ಯಕ್ತಪಡಿಸಿದರು.



ಪಟ್ಟಣದ ಎಸ್.ನಿಜಲಿಂಗಪ್ಪ ಎಜುಕೇಷನಲ್ ಅಂಡ್ ರೂರಲ್ ಡೆವಲಪ್‌ಮೆಂಟ್ ಟ್ರಸ್ಟ್ ಆವರಣದಲ್ಲಿ ನಡೆದ ಎಸ್.ನಿಜಲಿಂಗಪ್ಪ ಪದವಿಪೂರ್ವ ಕಾಲೇಜು ಕಟ್ಟಡದ ಶಿಲಾನ್ಯಾಸ ನೆರವೇರಿಸಿ ಮಾತನಾಡಿದರು.

ಈ ಹಿನ್ನೆಲೆಯಲ್ಲಿ ಎಸ್.ನಿಜಲಿಂಗಪ್ಪ ಎಜುಕೇಷನಲ್ ಅಂಡ್ ರೂರಲ್ ಡೆವಲಪ್‌ಮೆಂಟ್ ಟ್ರಸ್ಟ್ ಸಂಸ್ಥೆ ಕಳೆದ 20 ದಶಕಗಳ ಹಿಂದೆ ಹನಿ ಯಾಗಿತ್ತು ಅದರೆ ಇಂದು ಹನಿ ಹನಿ ಗೂಡಿ ಹೆಮ್ಮರವಾಗಿ ಬೆಳೆದು ನಿಂತಿದೆ ಶ್ರಮದ ಫಲದಿಂದ ಇನ್ನೂ ಬಹು ದೊಡ್ಡದಾಗಿ ಬೆಳೆಯಲಿ ಈ ಸಂಸ್ಥೆಗೆ ನಿಜಲಿಂಗಪ್ಪನವರ ಹೆಸರು ಇಟ್ಟಿರುವುದು ಅತ್ಯಂತ ಸೂಕ್ತವಾದದ್ದು ನಿಜಲಿಂಗಪ್ಪನರ ಆದರ್ಶಗಳನ್ನ ಇಟ್ಟುಕೊಂಡು ಬೆಳೆಯುತ್ತಿರುವ ಈ ಸಂಸ್ಥೆ ಸರ್ವರಿಗೂ ಸಹಾ ಮಾದರಿಯಾಗಿರಲಿ ಎಂದ ಶ್ರೀಗಳು ಇಂತಹ ಸಂಸ್ಥೆಯನ್ನ ಕಟ್ಟುವುದು ಅಷ್ಟೊಂದು ಸುಲಭವಲ್ಲ ಈ ಸಂಸ್ಥೆಯ ಆಡಳಿತ ಮಂಡಳಿ ಹಾಗೂ ಗುಣ ಮಟ್ಟದ ಭೋಧಕರ ಶ್ರಮ ಅತ್ಯಂತ ಶ್ಲಾಘನೀಯ.ಇಂದು ನಾವು ಇಷ್ಟಲಿಂಗ ಪ್ರಜೆ ಹಾಗೂ ಹೋಮ ಮಾಡಲಾಗಿದ್ದು ಮುಂದಿನ ದಿನಮಾಗಳಲ್ಲಿ ನಿಮ್ಮಗಳ ಇಷ್ಟದಂತೆ ಎಲ್ಲವೂ ಸಿದ್ದಸಲಿ ಎಂದು ಶುಭ ಹಾರೈಸಿದರು.

ಹುಣಸಘಟ್ಟ ಶ್ರೀ ತಪೋಕ್ಷೇತ್ರ ಹಾಲುಸ್ವಾಮಿ ಮಠದ ಶ್ರೀ ಗುರುಮೂರ್ತಿ ಶಿವಾಚಾರ್ಯ ಸ್ವಾಮೀಜಿ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು

ಈ ಸಂಧರ್ಬದಲ್ಲಿ ಸಂಸ್ಥೆಯ ಅಧ್ಯಕ್ಷ ಎಂ.ಶಿವಲಿಂಗಪ್ಪ. ಕಾರ್ಯದರ್ಶಿ ಕೆ.ಎಸ್. ಕಲ್ಮಠ್ ಪಿ.ಯು.ಕಾಲೇಜಿನ ಅಕಾಡಮಿ ಡೈರೆಕ್ಟರ್ ಎಂ.ಬಿ ತಿಪ್ಪೇಸ್ವಾಮಿ,ಸಂಸ್ಥೆಯ ಉಪಾಧ್ಯಕ್ಷ ಕೆ.ಎಸ್.ಪುಟ್ಟರಾಜು, ಖಜಾಂಚಿ ಕೆ.ಸಿ.ಮಲ್ಲಿಕಾರ್ಜುನಪ್ಪ ಸೇರಿದಂತೆ ಸಂಸ್ಥೆಯ ಆಡಳಿತ ಮಂಡಳಿ, ಸಿಬ್ಬಂಧಿ ವರ್ಗ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T